MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111


YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 22 | ಗುರುವಾರ : 06-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 22 | THURSDAY : 06-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಪ್ರವಾಹ ರಕ್ಷಣಾ ಕಾರ್ಯದ ಅಣಕು ಪ್ರದರ್ಶನ







ಯುವ ಮಾರ್ಗ ಸುದ್ದಿ

**ರಾಯಚೂರು,ನ.5–** ಪ್ರವಾಹ ಸಂದರ್ಭದಲ್ಲಿ ಜನರ ರಕ್ಷಣೆಗಾಗಿ ಕೈಗೊಳ್ಳಬೇಕಾಗಿರುವ ಮುನ್ನಚ್ಚರಿಕೆ ಕ್ರಮಗಳು, ವಿಪತ್ತು ನಿರ್ವಹಣೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ನಗರದ ಕೃಷ್ಣಗಿರಿಯ ಚೇತನ್ ಟೆಕ್ನೋ ಶಾಲೆಯ ಪಕ್ಕದ ಕೆರೆಯಲ್ಲಿ ಬುಧವಾರ ಅಣುಕು ಪ್ರದರ್ಶನ ನಡೆಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಅಗ್ನಿಶಾಮಕದಳ, ಗೃಹರಕ್ಷಕ ದಳ ಹಾಗೂ ಪೊಲೀಸ್ ಇಲಾಖೆ ಸಹಯೋಗದಿಂದ ನಡೆದ ಅಣಕು ಪ್ರದರ್ಶನದಲ್ಲಿ, ವಿಪತ್ತು ಅಪಾಯಕ್ಕೆ ಸಿಲುಕಿರುವ ಜನರ ರಕ್ಷಣೆ ಮಾಡುವ ಕಾರ್ಯಾಚರಣೆಯ ಪ್ರಾತ್ಯಕ್ಷಿಕೆ ನಡೆಸಲಾಯಿತು.

ನದಿಯಲ್ಲಿ ಸಿಲುಕಿರುವ ಜನರನ್ನು ರಕ್ಷಿಸಿ ನದಿಯಿಂದ ಹೊರ ತಂದು ಪ್ರಥಮ ಚಿಕಿತ್ಸೆ ನೀಡುವುದು ಮತ್ತು ಅಲ್ಲಿಂದ ಆಸ್ಪತ್ರೆಗೆ ಕಳುಹಿಸುವ ಸನ್ನಿವೇಶ ಪ್ರದರ್ಶಿಸಲಾಯಿತು.

ಪ್ರವಾಹದಲ್ಲಿ ಕೊಚ್ಚಿಕೊಂಡು ಹೋಗಿ ವ್ಯಕ್ತಿ ಮುಳುಗುತ್ತಿರುವ ಸಮಯದಲ್ಲಿ ಅಗ್ನಿಶಾಮಕ ಸಿಬ್ಬಂದಿ ದೋಣಿಯಲ್ಲಿ ರಕ್ಷಣೆ ಮಾಡುವ ಪ್ರಾತ್ಯಕ್ಷಿಕೆ ಎಲ್ಲರ ಗಮನ ಸೆಳೆಯಿತು.

ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಅವರು ಮಾತನಾಡಿ, ಪ್ರವಾಹ ಪರಿಸ್ಥಿತಿ ಉಂಟಾದಲ್ಲಿ ನಿರ್ವಹಣೆಗೆ ಎಲ್ಲ ರೀತಿಯಲ್ಲಿ ಸಿದ್ಧತೆ ಮಾಡಿಕೊಂಡಿದೆ. ಎಲ್ಲ ರೀತಿಯಿಂದ ಜಿಲ್ಲಾಡಳಿತ ಸನ್ನದ್ಧವಾಗಿದ್ದು, ಪೊಲೀಸ್ ಹಾಗೂ ಅಗ್ನಿಶಾಮಕ ದಳ ಕಾರ್ಯಾಚರಣೆ ಸಜ್ಜುಗೊಂಡಿದ್ದಾರೆ. ಜನರು ಪ್ರವಾಹ ಪರಿಸ್ಥಿತಿಯಲ್ಲಿ ನೀರಿಗೆ ಇಳಿಯುವುದು, ನೀರಿನ ಜೊತೆ ದುಸ್ಸಾಹಸಕ್ಕೆ ಕೈಹಾಕುವುದು ಮಾಡಬಾರದು. ಜಿಲ್ಲಾಡಳಿತಕ್ಕೆ ಸ್ಪಂದಿಸುವ ಕಾರ್ಯವಾಗಬೇಕು ಎಂದರು.

ಜಿಲ್ಲೆಯಲ್ಲಿ ಕೃಷ್ಣಾ, ತುಂಗಭದ್ರಾ ಹಾಗೂ ಭೀಮಾ ನದಿ ಪಾತ್ರದಲ್ಲಿ ಪ್ರವಾಹ ಉಂಟಾದಾಗ, ರಕ್ಷಣಾ ಕಾರ್ಯಾಚರಣೆ ಹೇಗಿರಬೇಕು ಎಂಬುದರ ಬಗ್ಗೆ ಅಣಕು ಪ್ರದರ್ಶನ ನಡೆಸಲಾಗುತ್ತಿದೆ. ಎಲ್ಲೆಲ್ಲಿ ಪ್ರವಾಹ ಉಂಟಾಗುತ್ತದೆ. ಎಷ್ಟು ಸೇತುವೆಗಳು ಮುಳುಗಡೆಯಾಗುತ್ತವೆ ಎಂಬುದನ್ನು ಗುರುತಿಸಿಕೊಂಡು ಆ ವ್ಯಾಪ್ತಿಯಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಲಾಗುತ್ತಿದೆ. ಪ್ರವಾಹ ನಿರ್ವಹಣೆಗೆ ಮುಂಜಾಗ್ರತವಾಗಿ ಜಿಲ್ಲಾಡಳಿತ ಜಾಗೃತಿ ಮೂಡಿಸುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎನ್.ಡಿ.ಆರ್.ಎಫ್ ಉಪ ಕಮಾಂಡರ್ ಅಕಿಲೇಶ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಭಾರಿ ಅಧಿಕಾರಿ ಡಾ.ಗಣೇಶ್, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ, ಡಿ.ಆರ್.ಎಫ್ ರವೀಂದ್ರ ಭಟ್ಟ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್, ಚೇತನ್ ಟೆಕ್ನೋ ಶಾಲೆಯ ಪ್ರಾಂಶುಪಾಲರಾದ ಕೆ.ಶ್ರೀರಕ್ಷ, ಜಿಲ್ಲಾಡಳಿತದ ವಿಪತ್ತು ನಿರ್ವಹಣಾ ಪರಿಣಿತರಾದ ಅನೀಲ್ ಕುಮಾರ್ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

## ವಸತಿ ನಿಲಯಕ್ಕೆ ಹೆಚ್ಚಿನ ಸೌಲಭ್ಯ : ಶಾಸಕ ಮಾನಪ್ಪ ವಜ್ಜಲ್



ಯುವ ಮಾರ್ಗ ಸುದ್ದಿ

**ಲಿಂಗಸಗೂರು,ನ.5–** ಹಿಂದುಳಿದ ವರ್ಗಗಳ ಬಾಲಕೀಯರ ವಸತಿ ನಿಲಯಕ್ಕೆ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು ಎಂದು ಶಾಸಕ ಮಾನಪ್ಪ ವಜ್ಜಲ್ ಭರವಸೆ ನೀಡಿದರು.

ಪಟ್ಟಣದ ಹುಲಿಗುಡ್ಡದಲ್ಲಿ ಇರುವ ಹಿಂದುಳಿದ ವರ್ಗಗಳ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಉದ್ಘಾಟನೆ ಹಾಗೂ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳ ಬಹುದಿನಗಳ ಕನಸ್ಸು ನನಸಾಗಿದೆ. ಬಾಡಿಗೆ ಕಟ್ಟಡದಲ್ಲಿ ಸರಿಯಾದ ಸೌಲಭ್ಯಗಳಿಲ್ಲದೆ ವಿದ್ಯಾರ್ಥಿಗಳು ತುಂಬ ತೊಂದರೆ ಅನುಭವಿಸುತ್ತಿದ್ದರು. ವಸತಿ ನಿಲಯದಲ್ಲಿರುವ ಮಕ್ಕಳು ಹಿಂದುಳಿದ ಹಾಗೂ ಬಡ ವಿದ್ಯಾರ್ಥಿಗಳಾಗಿದ್ದಾರೆ. ಆದ್ದರಿಂದ ವಸತಿ ನಿಲಯಗಳಲ್ಲಿ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು. ಗ್ರಾಮಾಂತರ ಪ್ರದೇಶದಲ್ಲಿರುವ ಮಕ್ಕಳಿಗೆ 100 ಕ್ಕೂ 100 ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಲು ಸರ್ಕಾರದ ಮೇಲೆ ಒತ್ತಡ ಹಾಕಿ ವ್ಯವಸ್ಥೆ ಮಾಡುತ್ತೇನೆ. ವಿದ್ಯಾರ್ಥಿ ಗಳು ತಮ್ಮ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರೆ ಆ ಸಮಸ್ಯೆಗಳನ್ನು ಪರಿ ಹರಿಸಲು ಸಾಧ್ಯ. ಹಿಂದುಳಿದ ವರ್ಗಗಳ ತಾಲೂಕು ಅಧಿಕಾರಿ ಮಾನಪ್ಪ ಬಡಿಗೇರ ಮಾತನಾಡಿ ನಮ್ಮ 18 ವಸತಿ ನಿಲಯಗಳಿ ವೆ. 1775 ವಿದ್ಯಾರ್ಥಿಗಳಿದ್ದಾರೆ. ನಮ್ಮ ತಾಲೂಕು ಎಜುಕೇಷನ್ ಹಬ್ ಆಗಿದೆ. ಆದ್ದರಿಂದ ತಾಲೂಕಿಗೆ ವೃತ್ತಿಪರ ವಸತಿ ನಿಲಯ ಮಂಜೂರು ಮಾಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ ಕು.ಸತ್ಯಮ್ಮ, ಹಿಂದುಳಿದ ವರ್ಗಗಳ ಜಿಲ್ಲಾಧಿಕಾರಿ ಸುನೀತಾ, ನಯೋಪ್ರಾ ಅಧ್ಯಕ್ಷ ಭೂಪನಗೌಡ ಪಾಟೀಲ್, ಬಸವನಗೌಡ ಮೇಟಿ, ಶಶಿಧರ ಪಾಟೀಲ್, ಬಿಜೆಪಿ ಮಂಡಲ ಅಧ್ಯಕ್ಷ ಕೆ,ನಾಗಭೂಷಣ, ಗಿರಿಮಲ್ಲನಗೌಡ, ಪರಶುರಾಮ ಕೆಂಭಾವಿ, ಅಯ್ಯಪ್ಪ, ಮುದಕಪ್ಪ ನಾಯಕ ಸೇರಿ ಇಲಾಖೆಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ರಾಯಚೂರು ಜಿಲ್ಲೆಯಲ್ಲಿ ಪ್ರಪ್ರಥಮ ಬಾರಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಉಚಿತ ತರಬೇತಿ

ಯುವ ಮಾರ್ಗ ಸುದ್ದಿ



**ರಾಯಚೂರು,ನ.5–**ರಾಯಚೂರು ಜಿಲ್ಲಾಡಳಿತವು ಮಹಾನಗರ ಪಾಲಿಕೆ ಮತ್ತು ಇನ್ನಿತರ ಇಲಾಖೆಗಳ ಸಹಯೋಗದೊಂದಿಗೆ 30 ದಿನಗಳ ಸಮಯ ರಾಯಚೂರ ಜಿಲ್ಲೆಯಲ್ಲಿ ಪ್ರಪ್ರಥಮ ಬಾರಿಗೆ ಹಮ್ಮಿಕೊಂಡ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿಯ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ವಿದ್ಯಾರ್ಥಿಗಳಲ್ಲಿ ಮನವಿ ಮಾಡಿದ್ದಾರೆ.

ಅತ್ಯುನ್ನತ ಐಎಎಸ್, ಐಪಿಎಸ್, ಐಆರ್ಎಸ್, ಕೆಎಎಸ್ ಪರೀಕ್ಷೆಗಳು ಸೇರಿದಂತೆ ಎಫ್ ಡಿಎ, ಎಸ್ ಡಿಎ, ಪೊಲೀಸ್, ಎಲ್ಲ ಬಗೆಯ ಗ್ರೂಪ್ ಸಿ ಪರೀಕ್ಷೆ ಸೇರಿದಂತೆ ಯಾವುದೇ ರೀತಿಯ ಸ್ಪರ್ಧಾತ್ಮಕ ಪರೀಕ್ಷೆ ಬರೆಯಬೇಕು ಎಂಬುದು ಪ್ರತಿಯೊಬ್ಬ ವಿದ್ಯಾರ್ಥಿಯ ಹಂಬಲವಾಗಿರುತ್ತದೆ. ಆದರೆ, ಸೂಕ್ತ ಮಾರ್ಗದರ್ಶನ ಕೊರತೆಯಿಂದ ಕೆಲ ವಿದ್ಯಾರ್ಥಿಗಳು ವಿಫಲರಾಗುತ್ತಾರೆ. ರಾಯಚೂರು ಜಿಲ್ಲೆಯಲ್ಲಿನ ಎಲ್ಲ ವಿದ್ಯಾರ್ಥಿಗಳಿಗೆ ಅನುಕೂಲವಾಗಬೇಕು. ಈ ಭಾಗದ ವಿದ್ಯಾರ್ಥಿಗಳು ಉನ್ನತ ಹುದ್ದೆಗಳಲ್ಲಿರಬೇಕು, ಸ್ಪರ್ಧಾತ್ಮಕ ಪರೀಕ್ಷೆ ಪಾಸು ಮಾಡಬೇಕು ಎಂದು ಯೋಚಿಸಿ ರಾಯಚೂರ ಜಿಲ್ಲೆಯಲ್ಲಿ ಈ ತರಬೇತಿ ಆಯೋಜನೆ ಮಾಡಲಾಗಿದೆ. ಈ ಭಾಗದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯಬೇಕು.

ಈ ಉಚಿತ ತರಬೇತಿಯ ಅರ್ಹತಾ ಪರೀಕ್ಷೆಯು ನವೆಂಬರ್ 12ರಂದು ಮಧ್ಯಾಹ್ನ 3 ರಿಂದ 4.30ರವರೆಗೆ ರಾಯಚೂರಿನ ಜಿಲ್ಲಾ ರಂಗಮಂದಿರ ಹತ್ತಿರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯಲಿದೆ. ಈ ಅರ್ಹತಾ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆಯುವ ಮೊದಲ 100 ಅಭ್ಯರ್ಥಿಗಳಿಗೆ ಮಾತ್ರ ಈ ಉಚಿತ ತರಬೇತಿಗೆ ಅವಕಾಶ ನೀಡಲಾಗುವುದು. ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನವೆಂಬರ್ 8ರವರೆಗೆ ಹೆಸರು ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.(2ನೇಪುಟಕ್ಕೆ..)

## ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ ಅವರನ್ನು ಅಮಾನತು ಮಾಡಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ನ.5–** ನವಂಬರ್ 1ರಂದು ಜರುಗಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ ಕನ್ನಡ ಮಾತನಾಡದೆ ಆಂಗ್ಲ ಭಾಷೆಯಲ್ಲಿ ಭಾಷಣ ಮಾಡುವ ಮೂಲಕ ಕನ್ನಡರಿಗೆ ಅಪಮಾನ ಮಾಡಿದ್ದಾರೆ. ಕೂಡಲೆ ಅವರನ್ನು ಅಮಾನತ್ತು ಮಾಡಬೇಕು ಎಂದು ಕನ್ನಡಪರ ಸಂಘಟನೆಗಳ ಒಕ್ಕೂಟದ ಸಂಚಾಲಕರಾದ ಬಸವರಾಜ್ ಗೋಪಾಲಪುರ ಹಾಗೂ ಯಲ್ಲಗೌಡ ಕೆ.ಇರಬಗೇರಾ ಒತ್ತಾಯಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಜಂಟಿಯಾಗಿ ಮಾತನಾಡಿದರು. ಸಾರ್ವಜನಿಕ ಕ್ಲಬ್ ಮೈದಾನದಲ್ಲಿ ತಾಲೂಕು ಆಡಳಿತದಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ (2ನೇಪುಟಕ್ಕೆ..)

## ಮತ ಕಳ್ಳತನದ ವಿರುದ್ಧ ಕಾಂಗ್ರೆಸ್ ಸಹಿ ಸಂಗ್ರಹ ಅಭಿಯಾನ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.5–** ಪಟ್ಟಣದ ವಾರ್ಡ್ ನಂಬರ್ 12 ರಲ್ಲಿ, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ವೋಟ್ ಚೋರಿ (ಮತ ಕಳ್ಳತನ) ವಿರುದ್ಧ ಬೃಹತ್ ಸಹಿ ಸಂಗ್ರಹ ಅಭಿಯಾನವನ್ನು ಹಮ್ಮಿಕೊಂಡಿದ್ದರು, ಈ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಮೊಹಮ್ಮದ್ ರೆಹಮತ್ ಅಲಿ ಅವರು, ಇಡೀ ಭಾರತ ದೇಶಾದ್ಯಂತ ಕೇಂದ್ರದ ಬಿಜೆಪಿ ಸರ್ಕಾರವು ದೇಶದ ಎಲ್ಲಾ ರಾಜ್ಯಗಳಲ್ಲಿ ವೋಟ್ ಚೋರಿ ಮಾಡಿ ಅಧಿಕಾರದಲ್ಲಿದೆ ಎಂದು ಬಿಜೆಪಿ ಸರ್ಕಾರದ ವಿರುದ್ಧ ತೀವ್ರವಾಗಿ ಗುಡಿಗಿದರು. ಅವರು ಮುಂದುವರೆಸಿ, ಇದೇ ರೀತಿ ಮುಂದುವರೆದರೆ ಅವರ ವಿರುದ್ಧ ಉಗ್ರವಾದ ಹೋರಾಟ ಮಾಡಲಾಗುವುದು ಮತ್ತು ಈಗಾಗಲೇ ಪ್ರತಿ ತಾಲೂಕು ಹಾಗೂ ಜಿಲ್ಲೆಗಳಲ್ಲಿ ಸಹಿ ಸಂಗ್ರಹಿಸಿ ಹೋರಾಟವನ್ನು ಹಮ್ಮಿಕೊಂಡಿದ್ದೇವೆ ಎಂದು ಎಚ್ಚರಿಸಿದರು. (2ನೇಪುಟಕ್ಕೆ...)

## ಯುವ ಸಂಸತ್ ನಿಂದ ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಪರಿಕಲ್ಪನೆ ಮೂಡುತ್ತದೆ: ಚಂದ್ರಶೇಖರ ದೊಡ್ಡಮನಿ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.5–**ಯುವ ಸಂಸತ್ ಕಾರ್ಯಕ್ರಮದಿಂದ ಚುನಾವಣೆ ವ್ಯವಸ್ಥೆ ಮತ್ತು ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ವಿದ್ಯಾರ್ಥಿಗಳಲ್ಲಿ


ಶಾಲಾ ಹಂತದಲ್ಲಿಯೇ ಮೂಡಿಸುವ ಮಹತ್ವದ ಯೋಜನೆಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಹೇಳಿದರು.

ಬುಧವಾರ ಪಟ್ಟಣದ ಶಾಸಕರ ಭವನದಲ್ಲಿ ನಡೆದ ಜಿಲ್ಲಾ ಪಂಚಾಯತ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಹಾಗೂ ತಾ.ಪಂ.ಮಾನ್ವಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನ್ವಿ ಸಂಯುಕ್ತಾಶ್ರಯದಲ್ಲಿ ನಡೆದ ಸರಕಾರಿ ಪ್ರೌಢಶಾಲೆ ವಿದ್ಯಾರ್ಥಿಗಳ ತಾಲೂಕು ಮಟ್ಟದ ಯುವ ಸಂಸತ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ರಾಜಕಾರಣಿ, ಚಿಂತಕ, ಸಮಾಜಸೇವಕರಾಗುವ ನಿಟ್ಟಿನಲ್ಲಿ ಪ್ರಜಾಪ್ರಭುತ್ವದ ಪರಿಕಲ್ಪನೆ ಅಗತ್ಯವಿದ್ದು, ಯುವ ಸಂಸತ್ ನಿಂದ ವಿದ್ಯಾರ್ಥಿಗಳು ಶಾಸಕರ,ಸಂಸದರ ಹಾಗೂ ಸಚಿವರು, ವಿರೋಧ ಪಕ್ಷ ನಾಯಕರ ಕಾರ್ಯ ಜವಾಬ್ದಾರಿಗಳನ್ನು ಅರಿತುಕೊಳ್ಳಲು ಉಪಯುಕ್ತವಾಗಿದೆ ಎಂದರು. ನಂತರ ಡಾಯಟ್ ನ ಹಿರಿಯ ಉಪನ್ಯಾಸಕರಾದ ಜೀವನ ಸಾಬ್ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲ ಆಸೆಯವೆ ಸಂಸತ್ತಾಗಿದ್ದು ಶಾಲೆ ಹಂತದಲ್ಲಿಯೇ ಮಕ್ಕಳಿಗೆ ಯುವ ಸಂಸತ್ ಮೂಲಕ ಪ್ರಜಾಪ್ರಭುತ್ವದ ಮಹತ್ವವನ್ನು ಹಾಗೂ ಜನಪ್ರತಿನಿಧಿಗಳ ಪಾತ್ರದ ಕುರಿತು ತಿಳುವಳಿಕೆ ಮೂಡಿಸಲಾ ಗುತ್ತದೆ ಎಂದರು.

ಮದ್ಲಾಪೂರು ಪ್ರೌಢಶಾಲೆಯ ಮುಖ್ಯ ಗುರುಗಳಾದ ನಾಗಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ದೀಪಾ, ನಿರ್ಣಾಯಕವಾಗಿ ಉಪನ್ಯಾಸಕರಾದ ಅಬ್ದುಲ್ ಹಸನ್, ಬಸವರಾಜ ಹಾಗೂ ಸಮಾಜ ವಿಜ್ಞಾನ ವಿಷಯ ವೇದಿಕೆ ಅಧ್ಯಕ್ಷರಾದ ಚನ್ನಬಸವ ಹಾಗೂ ವಿವಿಧ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಿಕ್ಷಕ ರಾಮಸ್ವಾಮಿ ಕಾರ್ಯ ಕ್ರಮವನ್ನು ನಿರೂಪಿಸಿದರು, ವಿದ್ಯಾರ್ಥಿ ತ್ರಿಶಾ ಸಂಗಡಿಗರು ಪ್ರಾರ್ಥಿಸಿದರು, ಶಿಕ್ಷಕಿ ಬಂಡೆಮ್ಮ ವಂದಿಸಿದರು.

## ಸಿಸಿ ರಸ್ತೆ ನಿರ್ಮಾಣಕ್ಕೆ ದಸಂಸ ಒತ್ತಾಯ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ನ.5–** ಪುರಸಭೆ ವ್ಯಾಪ್ತಿಯ 18ನೇ ವಾರ್ಡ್ ಹುಲಿಗುಡ್ಡದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಬೈಪಾಸ್ ರಸ್ತೆವರೆಗೆ ಸಿಸಿ ರಸ್ತೆ ನಿರ್ಮಾಣ ಮಾಡುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಒತ್ತಾಯಿಸಿದರು.

ಶಾಸಕ ಮಾನಪ್ಪ ವಜ್ಜಲ್‌ರಿಗೆ ಬುಧವಾರ ಮನವಿ ಸಲ್ಲಿಸಿದ ಅವರು, ಹುಲಿಗುಡ್ಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಬೆಂಗಳೂರು ಬೈಪಾಸ್ ರಸ್ತೆವರೆಗೆ ಸರಿಯಾದ ರಸ್ತೆ ಇಲ್ಲದೇ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಇನ್ನು ಮಳೆಗಾಲದಲ್ಲಂತೂ ನಿವಾಸಿಗಳು ಪಡಬಾರದ ಕಷ್ಟ ಪಡುತ್ತಿದ್ದಾರೆ. ವೃದ್ಧರು ಮತ್ತು ಮಕ್ಕಳು ಈ ರಸ್ತೆಯಲ್ಲಿ ಓಡಾಡಲು ಆಗುತ್ತಿಲ್ಲ. ದ್ವಿಚಕ್ರ ವಾಹನಗಳೂ ಓಡಾಡದಷ್ಟು ಕೆಟ್ಟದಾದ ರಸ್ತೆ ಇದೆ. ಕೂಡಲೇ ಸಿಸಿ ರಸ್ತೆ ನಿರ್ಮಾಣಕ್ಕೆ ಮುಂದಾಗಬೇಕು. ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದಸಂಸ ರಾಜ್ಯ ಸಂಘಟನಾ ಸಂಚಾಲಕ ಪ್ರಭುಲಿಂಗ ಮೇಗಳಮನಿ, ಮುಖಂಡರಾದ ಯಲ್ಲಪ್ಪ ಹಾಲಭಾವಿ, ಅಕ್ರಂಪಾಷಾ, ಷಣ್ಮುಖರಡ್ಡಿ, ಮಾಳಪ್ಪಗೌಡ, ಸಂಜೀವಮೂರ್ತಿ, ಹುಸೇನಪ್ಪನಾಯಕ, ಬಾಲರಾಜ ನಾಯಕ ಸೇರಿದಂತೆ ಇದ್ದರು.

## ಮೊದಲನೇಯ ಪುಟದಿಂದ

# ರಾಯಚೂರು ಜಿಲ್ಲೆಯಲ್ಲಿ ಪ್ರಪ್ರಥಮ ಬಾರಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಉಚಿತ ತರಬೇತಿ

ಪಿಯುಸಿ ಪಾಸಾದ ಹಾಗೂ ಪದವಿ ಓದುತ್ತಿರುವ ಅಥವಾ ಪದವಿ ಪೂರ್ಣಗೊಳಿಸಿದ ರಾಯಚೂರ ಸೇರಿದಂತೆ ರಾಜ್ಯದ ಯಾವುದೇ ಭಾಗದ ಆಸಕ್ತ ವಿದ್ಯಾರ್ಥಿಗಳು ಕ್ಯುಆರ್ ಕೋಡ್ ಬಳಸಿ ಹೆಸರು ನೋಂದಣಿ ಮಾಡಬಹುದಾಗಿದೆ. ಈ ತರಬೇತಿಯು ಜಿಲ್ಲಾ ರಂಗಮಂದಿರದ ಹಿಂದಿನ ಜಿಲ್ಲಾ ಕೇಂದ್ರ ಗ್ರಂಥಾಲಯದ ಹೊಸ ಕಟ್ಟಡದಲ್ಲಿ 30 ದಿನಗಳ ಕಾಲ ನಡೆಯಲಿದೆ. ಈ ತರಬೇತಿಗೆ ಯಾವುದೇ ಪ್ರವೇಶಾತಿ ಮತ್ತು ತರಬೇತಿ ಶುಲ್ಕ ಇರುವುದಿಲ್ಲ. ಈ ತರಬೇತಿ ಅವಧಿಯಲ್ಲಿ ಅರ್ಥಶಾಸ್ತ್ರ, ಭೌಗೋಳ ಶಾಸ್ತ್ರ, ಪರಿಸರ ಅಧ್ಯಯನ, ವಿಜ್ಞಾನ ಮತ್ತು ತಂತ್ರಜ್ಞಾನ, ಮಾನಸಿಕ ಸಾಮರ್ಥ್ಯ, ಭಾರತ ಸಂವಿಧಾನ, ಇತಿಹಾಸ ಸೇರಿದಂತೆ ಹಲವು ವಿಷಯಗಳ ಪಾಠ ಬೋಧನೆಯು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ನಡೆಯಲಿದೆ.

ಹೆಸರು ನೋಂದಣಿ, ಅರ್ಹತಾ ಪರೀಕ್ಷೆ, ತರಬೇತಿಯ ವಿಷಯಗಳು ಸೇರಿದಂತೆ ಹೆಚ್ಚಿನ ಮಾಹಿತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಯ ಉಚಿತ ತರಬೇತಿ ಕಾರ್ಯಕ್ರಮದ ನೋಡಲ್ ಅಧಿಕಾರಿಗಳು ಆಗಿರುವ ತಹಸೀಲ್ದಾರರಾದ ಸುರೇಶ ವರ್ಮಾ ಮೊ.,8660832180, ಅಮರೇಶ ಬಿರಾದಾರ ಮೊ:9886651314, ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರವೀಣ ಕುಮಾರ ಮೊ: 8951683988 ಇವರಿಗೆ ಸಂಪರ್ಕಿಸಬಹುದಾಗಿದೆ. ಇನ್ನಿತರ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ರಂಗಮಂದಿರ ಹಿಂದುಗಡೆಯ ಜಿಲ್ಲಾ ಗ್ರಂಥಾಲಯದ ಕಚೇರಿಯನ್ನು ಕಚೇರಿ ಅವಧಿಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ ಅವರನ್ನು ಅಮಾನತು ಮಾಡಿ

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಅವರು ಕನ್ನಡ ಮಾತನಾಡದೆ ಆಂಗ್ಲ ಭಾಷೆಯಲ್ಲಿ ಭಾಷಣ ಮಾಡುವ ಮೂಲಕ ಕನ್ನಡ ಭಾಷೆ ಮತ್ತು ಕನ್ನಡಿಗರಿಗೆ ಅಪಮಾನ ಮಾಡಿದ್ದಾರೆ. ವೇದಿಕೆ ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಶಿವರಾಜ್ ಅವರು ಆಕ್ಷೇಪ ವ್ಯಕ್ತಪಡಿಸಿ, ಕನ್ನಡದಲ್ಲಿ ಮಾತನಾಡುವಂತೆ ಮನವಿ ಮಾಡಿದ್ದಾರೆ. ಆದರೆ ಈ ಬಗ್ಗೆ ಎಚ್ಚೆತ್ತುಕೊಳ್ಳದ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಆಂಗ್ಲ ಭಾಷೆಯಲ್ಲಿ ಮಾತನಾಡುವ ಮೂಲಕ ತಮ್ಮ ಅಧಿಕಾರದ ದರ್ಪ ತೋರಿದ್ದಾರೆ. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡದಲ್ಲಿ ಮಾತನಾಡಿ ಎಂದು ಹೇಳಿದರೂ ಅಧಿಕಾರದ ದರ್ಪ ಹಾಗೂ ತಾವು ಮಾಡಿದ್ದೆ ಕಾನೂನು ಎನ್ನುವಂತೆ ವರ್ತಿಸುತ್ತಿದ್ದಾರೆ. ಇದು ತೀವ್ರ ಖಂಡನೀಯವಾಗಿದ್ದು ಒಬ್ಬ ತಾಲೂಕು ದಂಡಾಧಿಕಾರಿಯಾಗಿ ಕನ್ನಡ ಭಾಷೆಯ ಗುತ್ತಿದ್ದರೂ ಮಾತನಾಡದೆ ಆಂಗ್ಲ ಭಾಷೆಯಲ್ಲಿ ಭಾಷಣ ಮಾಡುವ ಮೂಲಕ ಉದ್ಧಟತನ ಮೆರೆದಿದ್ದಾರೆ ಎಂದು ಟೀಕಿಸಿದರು.

ಕೂಡಲೇ ಜಿಲ್ಲಾಧಿಕಾರಿಗಳು ಈ ಬಗ್ಗೆ ಪರಿಶೀಲನೆ ನಡೆಸಿ, ಕನ್ನಡ ಭಾಷೆಗೆ ಅಪಮಾನ ಮಾಡಿರುವ ತಾಲೂಕು ದಂಡಾಧಿಕಾರಿ ನಾಗಮ್ಮ ಕಟ್ಟಿಮನಿ ಅವರನ್ನ ಸೇವೆಯಿಂದ ಅಮಾನತು ಮಾಡಬೇಕು. ನಿರ್ಲಕ್ಷ್ಯ ಮಾಡಿದರೆ ಜಿಲ್ಲಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಕನ್ನಡಪರ ಸಂಘಟನೆಯ ಪ್ರಮುಖರಾದ ನಂದಪ್ಪ ಟಿ.ಮಡ್ಡಿ, ಉಸ್ಮಾನ್ ಪಾಷಾ ಗೌರಂಪೇಟೆ, ಅಮರೇಶ್ ಚೌಹಾನ್ ಹುಸೇನ್ ಬಾಷಾ ಬಸವರಾಜ್ ಗೋಸಲ್ ಸುರೇಶ್ ಪಾಟೀಲ್, ಗೋರ್ನಾಥ್ ರೆಡ್ಡಿ ಭೀಮಣ್ಣ ನಾಯಕ್ ಮುಸ್ತಾಫ್ ಇದ್ದರು.

# ಕಳ್ಳತನದ ವಿರುದ್ಧ ಕಾಂಗ್ರೆಸ್‌ನ ಸಹಿ ಸಂಗ್ರಹ ಅಭಿಯಾನ

ಈ ಸಂದರ್ಭದಲ್ಲಿ ಮಾನ್ವಿ ಬ್ಲಾಕ್ ಕಾಂಗ್ರೆಸ್ಸಿನ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಕಾಂಗ್ರೆಸ್ ಪಕ್ಷದ ಯುವ ನಾಯಕ ಮೊಹಮ್ಮದ್ ರೆಹ್ಮತ್ ಅಲಿ, ಮಾನ್ವಿ ಬ್ಲಾಕ್ ಕಾಂಗ್ರೆಸ್ಸಿನ ಪ್ರಧಾನ ಕಾರ್ಯದರ್ಶಿಗಳಾದ ಹಿ ದಾಯತ್ ನಾಯ್ಕ್, ಹಾಗೂ ವಾರ್ಡ್ ನಂಬರ್ 12ರ ಹಿರಿಯ ಮುಖಂಡರಾದ ಮಲ್ಲಪ್ಪ ಪವಾಡಿ, ಸಾಧಿಕ್ ಹುಸೇನ್ ಖುರೇಶಿ, ಗೋಪಿ ದೇಸಾಯಿ, ಹಾಜಿ ಮೆಕಾನಿಕ್, ಮೊಹಮ್ಮದ್ ಹಾಸಿಮ್ ಖುರೇಶಿ, ಕಮಲಿ ಬಾಬಾ, ವಿಜಯ್ ಕುಮಾರ್ ಗೌಡ, ಸೈಯದ್ ಶಮಿ ಮುದ್ದಿನ್ ಖಾದ್ರಿ, ಹಂಪಯ್ಯ ನಾಯಕ್ ಬೆಳಗ್ಗಿನಪೀಟ್, ಸೈಯದ್ ಯೂಸುಫ್ ಸಾಹೇಬ್, ನೂರ್ ಮೇಸ್ತ್ರಿ, ಡಾಕ್ಟರ್ ರಾಘವೇಂದ್ರ, ಕಾಮೇಶ್ ಮಂದದಕಲ್, ಡಾಕ್ಟರ್ ಪ್ರಕಶ್, ಅಬ್ಬು ಪಟೇಲ್, ಅಬ್ದುಲ್ ಲತೀಫ್, ಕನಕಪ್ಪ ಯಾದವ್, ಮತ್ತು ಅಲಂ ಭಾಷಾ ಸೇರಿದಂತೆ ವಾರ್ಡಿನ ಎಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಹರನಹಳ್ಳಿ ಶ್ರೀರಾಮಲಿಂಗೇಶ್ವರ ದೇವಸ್ಥಾನದಲ್ಲಿ ಕಾರ್ತಿಕಮಾಸದ ಅಂಗವಾಗಿ ದೀಪೋತ್ಸವ ಕಾರ್ಯಕ್ರಮ

ಯುವ ಮಾರ್ಗ ಸುದ್ದಿ

**ಮಾನ್ವಿ,ನ.5–** ತಾಲೂಕಿನ ಹರನಹಳ್ಳಿ ಗ್ರಾಮದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದಲ್ಲಿ ಕಾರ್ತಿಕಮಾಸದ ಅಂಗವಾಗಿ 5ನೇ ವರ್ಷದ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಬೆಳಿಗ್ಗೆ ಶ್ರೀ ರಾಮಲಿಂಗೇಶ್ವರ ಸ್ವಾಮಿಯ ಮೂರ್ತಿಗೆ ರುದ್ರಾಭಿಷೇಕ, ಮಹಾಮಂಗಳಾರತಿ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಲಾಯಿತು.



ಸಂಜೆ ನೀಲಗಲ್ ಸಂಸ್ಥಾನ ಬೃಹನ್ಮಠದ ಶ್ರೀ ರೇಣುಕಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀರಾಮಲಿಂಗೇಶ್ವರ ಸ್ವಾಮಿಯ ಮೂರ್ತಿಗೆ ಪೂಜೆ ಸಲ್ಲಿಸಿ ದೀಪವನ್ನು ಬೆಳಗಿಸುವ ಮೂಲಕ 5ನೇ ವರ್ಷದ ಕಾರ್ತಿಕ ದೀಪೋತ್ಸವಕ್ಕೆ ಚಾಲನೆ ನೀಡಿ ಆಶೀರ್ವಾಚನ ನೀಡಿ ಕತ್ತಲಿನಿಂದ ಬೆಳಕಿನ ಕಡೆ ಜೀವನ ವನ್ನು ಸಾಗಿಸಬೇಕು ಎಂದರೆ ನಮ್ಮ ಮನಸ್ಸಿನಲ್ಲಿಯು ಕೂಡ ಜ್ಞಾನದ ದೀಪವನ್ನು ಬೆಳಗಿಸುವುದರ ಸಂಕೇತವಾಗಿ ಕಾರ್ತಿಕವಾಸ ದಲ್ಲಿ ದೀಪವನ್ನು ಬೆಳಗಿಸಲಾಗುತ್ತದೆ. ನಮ್ಮ ದೇಶದ ಕಣ,ಕಣ, ಕೂಡ ಪವಿತ್ರವಾಗಿದೆ.ಭಾರತ ಸಂಸ್ಕೃತಿ ಅತ್ಯಂತ ವಿಶೇಷವಾಗಿದ್ದು ನಮ್ಮ ದೇಶದ ಕುರುಹುಗಳು ವಿಶ್ವದ ಎಲ್ಲಾ ದೇಶಗಳಲ್ಲಿಯು ಕೂಡ ಕಾಣಬಹುದಾಗಿದೆ. ಮಲೇಶಿಯದೇಶದಲ್ಲಿ ಶ್ರೀ ರಾಮನ ಪಾದವನ್ನು ಅಣೆಯಾಗಿಟ್ಟು ಕೊಂಡು ಇಂದಿಗೂ ಕೂಡ ಪ್ರಮಾಣ ಮಾಡುವ ಪದ್ಧತಿಯಿದೆ. ನಮ್ಮ ದೇಶದ ಪ್ರತಿಯೊಬ್ಬರು ಸುಖ ಮತ್ತು ಶಾಂತಿ ,ನೆಮ್ಮದಿಯಿಂದ ಬಾಳುವುದಕ್ಕೆ ವಾಸ್ತವಿಕ ಸತ್ಯವನ್ನು ನಾವು ತಿಳಿದುಕೊಂಡು ವ್ಯವಹರಿಕ ಜೀವನವನ್ನು ನಡೆಸಿ ಒಳ್ಳೆಯ ಮಾರ್ಗದಲ್ಲಿ ನಡೆದಾಗ ಮಾತ್ರ ಜೀವನ ಸುಂದರವಾಗಿರುತ್ತದೆ ಎಂದು ತಿಳಿಸಿದರು.

ರಾಯಚೂರು ಸೋಮವಾರ ಪೇಟೆ ಹಿರೇಮಠದ ಶ್ರೀ ಅಭಿನವ ರಾಯಚೋಟಿವೀರ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಆರ್ಚಕರಾದ ಅಮರೇಶ ತಾತ,ಗ್ರಾಮದ ಮುಖಂಡರಾದ ಸೋಮಶೇಖರ್ ಪಾಟೀಲ್, ರಾಜಪ್ಪ ಗೌಡ, ಪಂಪಣ್ಣಗೌಡ, ಪ್ರಕಾಶ್ ತಾತ, ದೊಡ್ಡ ಯಲ್ಲಯ್ಯ, ಸೇರಿದಂತೆ ಸಾವಿರಾರು ಭಕ್ತರು ಭಾಗವಹಿಸಿದರು.

ಶ್ರೀರಾಮಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಸಾವಿರಾರು ಭಕ್ತರಿಂದ ದೀಪೋತ್ಸವ ನಡೆಯಿತು.

# ಜವಳಿ ಚಿತ್ರಕಲೆ, ಸಣ್ಣ ವ್ಯವಹಾರದ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ನ.5–**ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ

ಜವಳಿ ಚಿತ್ರಕಲೆ, ಸಣ್ಣ ವ್ಯವಹಾರದ ಕುರಿತು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 31ದಿನಗಳ ಕಾಲ ಇರುತ್ತದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ನೊಂದಿಗೆ ನವೆಂಬರ್ 13ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 8217382735, 9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಂದಿನ ತುಪ್ಪದ ಏಕಾಏಕಿ 90 ರೂ. ಏರಿಕೆ..!




**ಬೆಂಗಳೂರು,ನ.5–** ಒಂದು ಕಡೆ ದಿನನಿತ್ಯದ ವಸ್ತುಗಳ ಬೆಲೆ ಏರಿಕೆಯಿಂದ ಜನರು ಏದುಸಿರು ಬೀಡುತ್ತೀರುವ ಸಂದರ್ಭದಲ್ಲೇ ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿಯೂ ನಂದಿನ ತುಪ್ಪದ ಏಕಾಏಕಿ 90 ರೂ. ಏರಿಕೆ ಮಾಡಿದೆ.

ನಂದಿನಿ ತುಪ್ಪದ ದರ ಪ್ರತಿ ಕೆಜಿಗೆ 90 ರೂ. ಏರಿಕೆ ಮಾಡಿ ಆದೇಶ ಹೊರಡಿಸಿದ್ದು, ಇಂದಿನಿಂದಲೇ ನೂತನ ದರ ಜಾರಿಗೆ ಬರಲಿದೆ ಎಂದು ತಿಳಿಸಿದೆ.ಈ ಹಿಂದೆ 1 ಕೆಜಿ ತುಪ್ಪಕ್ಕೆ 610 ರೂ. ಇತ್ತು, ಸದ್ಯ 90 ರೂ. ಏರಿಕೆಯಿಂದ 700 ರೂ.ಗೆ ಏರಿಕೆಯಾಗಿದೆ. ತುಪ್ಪ ಹೊರತುಪಡಿಸಿ ಇತರೇ ನಂದಿನಿ ಉತ್ಪನ್ನಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

ಕೆಎಂಎಫ್ ತುಪ್ಪಕ್ಕೆ ಹೊರ ರಾಜ್ಯಗಳಿಂದಲೂ ಭಾರೀ ಬೇಡಿಕೆ ಇರುವ ಕಾರಣ ಬೆಲೆ ಹೆಚ್ಚಳ ಮಾಡಲಾಗಿದೆ. ಒಂದು ಲೀಟರ್ ತುಪ್ಪದ ದರ 90 ರೂ. ಏರಿಕೆಯಾಗಿದೆ. ಇದೀಗ ಒಂದು ಲೀಟರ್ ಏಒಈ ತುಪ್ಪ 700 ರೂ. ನಿಗಧಿ ಮಾಡಲಾಗಿದೆ.

ಈ ಮೊದಲು 610 ರೂಗೆ ಒಂದು ಲೀಟರ್ ತುಪ್ಪ ಮಾರಾಟ ಮಾಡಲಾಗುತ್ತಿತ್ತು. ಜಿಎಸ್‌ಟಿ ಸ್ಲ್ಯಾಬ್ ಸುಧಾರಣೆ ಮುನ್ನ 650 ರೂ. ಇತ್ತು ಜಿಎಸ್‌ಟಿ ಸುಧಾರಣೆ ಬಳಿಕ 40 ರೂಪಾಯಿ ಇಳಿಕೆ ಮಾಡಲಾಗಿತ್ತು. ಜಿಎಸ್‌ಟಿ ಸುಧಾರಣೆ ಮುನ್ನ ದರ ಏರಿಸಲು ಕೆಎಂಎಫ್ ನಿರ್ಧರಿಸಿತ್ತು. ವಿಶ್ವ ಮಾರುಕಟ್ಟೆಯಲ್ಲಿ ತುಪ್ಪದ ದರ ಏರಿಕೆ ಹಿನ್ನೆಲೆ ಅನಿವಾರ್ಯ ಅಗಿ ತುಪ್ಪದ ದರ ಏರಿಕೆ ಮಾಡಲಾಗಿದೆ ಎಂದು ಕೆಎಂಎಫ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಸಾರಿಗೆ ಸೌಕರ್ಯಕ್ಕೆ ಸುಪ್ರೀಂ ಮೆಚ್ಚುಗೆ

**ನವದೆಹಲಿ.ನ5–** ದೇಶದ ರಸ್ತೆ ಪ್ರಯಾಣದಲ್ಲಿ 'ಕ್ರಾಂತಿ' ಸಾಧಿಸಲು ಗಂಭೀರ ಮತ್ತು ನಿಷ್ಠಾವಂತ ಪ್ರಯತ್ನಗಳು ನಡೆದಿವೆ ಮತ್ತು ಹಿಂದಿನ ವರ್ಷಗಳಿಗೆ ಹೋಲಿಸಿದರೆ ಮೂಲಸೌಕರ್ಯ ಅಭಿವೃದ್ಧಿಯಲ್ಲಿ 'ಗಣನೀಯ ಅಭಿವೃದ್ಧಿ ಸಾಧಿಸಿದೆ ಎಂದು ಸುಪ್ರಿಂಕೋರ್ಟ್ ಹೇಳಿದೆ.

ಈ ಕುರಿತು ಆಡಳಿತಾತ್ಮಕ ತೀರ್ಪಿನಲ್ಲಿ ಟಿಪ್ಪಣಿ ಮಾಡಿರುವ ನ್ಯಾಯಮೂರ್ತಿಗಳು ರಸ್ತೆ ಸಾರಿಗೆಯ ವಿಕಾಸವನ್ನು ಪರಿಗಣಿಸಿದಾಗ, ದೇಶವು ತನ್ನ "ಸಾಧಾರಣ ಆರಂಭ"ವನ್ನು ಮೀರಿ ಈಗ ಸಂಕೀರ್ಣವಾದ ಹೆದ್ದಾರಿಗಳ ಜಾಲವನ್ನು ನಿರ್ಮಿಸಿದೆ ಎಂದು ಕೋರ್ಟ್ ಗಮನಿಸಿದೆ. ಇದರಿಂದ ದೂರದ ಗ್ರಾಮಗಳು ಸಮೀಪದ ನಗರಗಳೊಂದಿಗೆ ಸಂಪರ್ಕ ಹೊಂದುತ್ತಿರುವುದು ಖಚಿತವಾಗಿದೆ ಎಂದು ತೀರ್ಪಿನಲ್ಲಿ ನ್ಯಾಯಮೂರ್ತಿಗಳು ತಿಳಿಸಿದ್ದಾರೆ.

"ನಿರ್ಮಾಣ ಹಂತದಲ್ಲಿರುವ ಹೆದ್ದಾರಿಗಳು ಮತ್ತು ಎಕ್ಸ್‌ಪ್ರೆಸ್ ವೇಗಳು ಭಾರತದ ಸಾರಿಗೆ ಭೂದೃಶ್ಯವನ್ನು ರೂಪಾಂತರಿಸುತ್ತಿವೆ ಮತ್ತು ಆರ್ಥಿಕ ಬೆಳವಣಿಗೆಗೆ ಚಾಲನೆ ನೀಡುತ್ತಿವೆ" ಎಂದು ಕೋರ್ಟ್ ವಿವರಿಸಿದೆ. ಎಕ್ಸ್‌ಪ್ರೆಸ್‌ವೇಗಳು ದೂರದ ಸ್ಥಳಗಳ ನಡುವೆ ಜನರು ಮತ್ತು ಸರಕುಗಳ ವೇಗವಾದ ಚಲನೆಯನ್ನು ಸುಲಭಗೊಳಿಸಿ, ಪ್ರಯಾಣದ ಸಮಯವನ್ನು ಗಮನಾರ್ಹವಾಗಿ ಕಡಿಮೆ ಮಾಡಿವೆ ಎಂದು ಸೇರಿಸಿದೆ.

ನ್ಯಾಯಮೂರ್ತಿ ದೀಪಂಕರ್ ದತ್ತ ಮತ್ತು ನ್ಯಾಯಮೂರ್ತಿ ಎ.ಜಿ. ಮಸೀಹ್ ಅವರ ಪೀಠವು ಖಾಸಗಿ ಸಾರಿಗೆ ನಿರ್ವಾಹಕರು, ಯು.ಪಿ.ಎಸ್.ಆರ್.ಟಿ.ಸಿ. ಮತ್ತು ಎಂ.ಪಿ.ಎಸ್.ಆರ್.ಟಿ.ಸಿ. ನಡುವಿನ ವಿವಾದವನ್ನು ನಿರ್ಣಯಿಸುವಾಗ ಈ ಮಾತುಗಳನ್ನು ಆಡಿದೆ. ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಮೀಸಲಾದ ಅಂತರ-ರಾಜ್ಯ ಸಾರಿಗೆ ಮಾರ್ಗದಲ್ಲಿ ಖಾಸಗಿ ನಿರ್ವಾಹಕರು ವಾಹನಗಳನ್ನು ಚಲಾಯಿಸಲು ಸಾಧ್ಯವಿಲ್ಲ ಎಂದು ಕೋರ್ಟ್ ತೀರ್ಪು ನೀಡಿದೆ. ತೀರ್ಪನ್ನು ಮುಕ್ತಾಯಗೊಳಿಸುವ ಮುನ್ನ, ನ್ಯಾಯಮೂರ್ತಿಗಳು ಭಾರತದ ರಸ್ತೆ ಮೂಲಸೌಕರ್ಯದ ಬಗ್ಗೆ ಈ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ನ್ಯಾಯಮೂರ್ತಿಗಳು ಆಧುನಿಕ ಹೆದ್ದಾರಿಗಳ ಮೇಲ್ಮೈ "ಇದುವರೆಗಿನದಕ್ಕಿಂತಲೂ ಈಗ ಪ್ರಯಾಣಕ್ಕೆ ಹೆಚ್ಚು ಅನುಕೂಲಕರವಾಗಿದೆ ಎಂದು ಒತ್ತಿಹೇಳಿದರು. ಸಾರ್ವಜನಿಕ ವಾಹನ ಸೇವಾ ಪೂರೈಕೆದಾರರು ಈಗ ವಿದೇಶಗಳಲ್ಲಿ ಲಭ್ಯವಿರುವ ಸೇವೆಗಳಿಗೆ ಸಮಾನವಾದ ಆರಾಮ ಮತ್ತು ಅನುಕೂಲವನ್ನು ಒದಗಿಸುತ್ತಿರುವುದನ್ನು ಎಂದು ಕೋರ್ಟ್ ಗಮನಿಸಿದೆ. ವಿದ್ಯುತ್ ವಾಹನಗಳ ಕಡೆಗೆ ಹೆಚ್ಚುತ್ತಿರುವ ಬದಲಾವಣೆಯು 'ಸುಸ್ಥಿರ ಸಾರಿಗೆ'ವ್ಯವಸ್ಥೆಗೆ



ದಾರಿ ಮಾಡಿಕೊಟ್ಟಿದೆ ಮತ್ತು ಆಧುನಿಕ, ಪರಿಸರ ಸಚೇತನ ಪ್ರಯಾಣ ಪರಿಸರಕ್ಕೆ ಕೊಡುಗೆ ನೀಡಿದೆ ಎಂದು ತೀರ್ಪು ಸೂಚಿಸಿದೆ.

ಕೋರ್ಟ್ ಅನುಸಾರ, ಈ ರೂಪಾಂತರದ ಪ್ರಮುಖ ಲಕ್ಷಣವೆಂದರೆ ತಂತ್ರಜ್ಞಾನದ ಏಕೀಕರಣ. 'ಸ್ಮಾರ್ಟ್ ಸಾರಿಗೆಯು ದಕ್ಷತೆ ಮತ್ತು ಸುರಕ್ಷತೆಯನ್ನು ಹೆಚ್ಚಿಸಲು ತಂತ್ರಜ್ಞಾನದ ಏಕೀಕರಣದಿಂದ ನಿರೂಪಿತವಾಗಿದೆ. ನಿರಂತರ ನಾವಿನ್ಯತೆ ಮತ್ತು ಹೂಡಿಕೆಯೊಂದಿಗೆ, ರಸ್ತೆ ಸಾರಿಗೆ ಕ್ಷೇತ್ರವು ಹೆಚ್ಚಿನ ದಕ್ಷತೆ, ಸುಸ್ಥಿರತೆ ಮತ್ತು ಪ್ರವೇಶಿಸಬಹುದಾಗಿರುವಿಕೆಯನ್ನು ಸಾಧಿಸಲು ಪ್ರಗತಿ ಸಾಧಿಸಿದೆ' ಎಂದು ತೀರ್ಪು ದಾಖಲಿಸಿದೆ.

ರಾಜ್ಯ ರಸ್ತೆ ಸಾರಿಗೆ ನಿಗಮಗಳ (SRTC) ಡೇಟಾವನ್ನು ಉಲ್ಲೇಖಿಸಿ, ಅವುಗಳಲ್ಲಿ ಹಲವು 'ಏಳಿಗೆ' ಹೊಂದುತ್ತಿವೆ ಮತ್ತು 'ಅದ್ಭುತ ಬೆಳವಣಿಗೆ ಮತ್ತು ತಂತ್ರಜ್ಞಾನದ ಅಳವಡಿಕೆ' ಕಂಡಿವೆ ಎಂದು ಕೋರ್ಟ್ ತಿಳಿಸಿದೆ. ಕಾರ್ಯಾಚರಣೆಗಳ ಡಿಜಿಟಲೀಕರಣವು 'ಗೇಮ್ ಚೇಂಜರ್' ಆಗಿದೆ ಎಂದು ಗಮನಿಸಿದ ಕೋರ್ಟ್, ಆನ್‌ಲೈನ್ ಬುಕಿಂಗ್, ಮೊಬೈಲ್ ಅಪ್ಲಿಕೇಶನ್‌ಗಳ ಮೂಲಕ ಲೈವ್ ಟ್ರ್ಯಾಕಿಂಗ್ ಮತ್ತು ಸುಧಾರಿತ ಗ್ರಾಹಕ ಅನುಭವವನ್ನು ಸಾಧ್ಯಗೊಳಿಸಿದೆ ಎಂದು ಹೇಳಿದೆ.

ಕೆಲವು ಮಾರ್ಗಗಳಲ್ಲಿ ಹಳೆಯ ಬಸ್ಸುಗಳನ್ನು ಇನ್ನೂ ಬಳಸಲಾಗುತ್ತಿದ್ದರೂ, ಕೆಲವು ವಲಯಗಳಲ್ಲಿ 'ಇ-ಬಸ್ಸುಗಳಂತಹ ಆಧುನಿಕ ಯುಗದ ವಾಹನಗಳನ್ನು ಪರಿಚಯಿಸಲಾಗಿದೆ' ಎಂದು ಕೋರ್ಟ್ ಪ್ರಶಂಸಿಸಿದೆ.

ತೀರ್ಪನ್ನು ಮುಕ್ತಾಯಗೊಳಿಸುವಾಗ, ಸಾರಿಗೆ ಕ್ಷೇತ್ರದಲ್ಲಿ ದೇಶವು ಗಣನೀಯ ಪ್ರಗತಿ ಸಾಧಿಸುತ್ತಿದ್ದಂತೆ, "ಪ್ರಯಾಣಿಕರು ಮತ್ತು ಹಿತಾಸಕ್ತಿಗಳು ಸಾರಿಗೆ ಅಧಿಕಾರಿಗಳ ಪ್ರಾಥಮಿಕ ಕಾಳಜಿಯಾಗಿರಬೇಕು" ಎಂದು ಕೋರ್ಟ್ ಒತ್ತಿಹೇಳಿದೆ.

# ಜಿಲ್ಲಾ ಅಂಧತ್ವ ಕಾರ್ಯಕ್ರಮದ ಅಡಿಯಲ್ಲಿ ಒಪ್ಪಂದಕ್ಕೆ ಅರ್ಜಿ ಆಹ್ವಾನ

**ರಾಯಚೂರು,ನ.5–** ಕರ್ನಾಟಕ ಸಾರ್ವಜನಿಕ ಸಂಗ್ರಹಗಳ ಪಾರದರ್ಶಕ ಅಧಿನಿಯಮ-99/2000 ಮತ್ತು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಿರುವ ಷರತ್ತುಗಳನ್ವಯ ನೊಂದಾಯಿತ ಅರ್ಹ ಸಂಸ್ಥೆಗಳಿಂದ ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು ರಾಯಚೂರು 2025-2026 ನೇ ಸಾಲಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯ ಅನ್ವಯ ರಾಷ್ಟ್ರೀಯ ಅಂಧತ್ವ ನಿಯಂತ್ರಣಾ ಕರ್‍ಯಕ್ರಮದಡಿಯಲ್ಲಿ 2025-2026 ನೇ ಸಾಲಿಗೆ ಉಚಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಮಾಡಲು ಆಸಕ್ತಿಯುಳ್ಳ ಸಂಘ ಸಂಸ್ಥೆಯವರು (ಕಣ್ಣಿನ ಬೆಸ್ಡ್ ಆಸ್ಪತ್ರೆ ಹೊಂದಿರುವ) ಸಂಘದ ಜಿಲ್ಲಾ ಅಂಧತ್ವ ಕಾರ್ಯಕ್ರಮದ ಅಡಿಯಲ್ಲಿ ಒಪ್ಪಂದ ಮಾಡಿಕೊಳ್ಳಲು ಟೆಂಡರ್ ಕರೆಯಲಾಗಿದ್ದು, ಆಸಕ್ತರು ನವೆಂಬರ್ 12ರೊಳಗಾಗಿ ವೆಬ್‌ಸೈಟ್ ವಿಳಾಸ: ɿttps://kppp.karnataka.gov.in/ ಮುಖಾಂತರ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳನ್ನು ಕಚೇರಿಯ ಸಮಯದಲ್ಲಿ ಭೇಟಿ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕ. ಸಂಘ-ನೇತ್ರ ವಿಭಾಗದ ಪ್ರಭಾರಿ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ಕ ಪಡೆ ಯೋಜನೆಗೆ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು,ನ.5–** ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಮಾಜ ಸೇವೆಯ ನಿಟ್ಟಿನಲ್ಲಿ ರೂಪಿಸಲಾದ ಅಕ್ಕ ಪಡೆ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ 05 ಮಹಿಳಾ ಎನ್ಸಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡುವುದು ಅಕ್ಕ ಪಡೆ ಯೋಜನೆಯ ಪ್ರಾಥಮಿಕ ಉದ್ದೇಶವಾಗಿದೆ. ಸಹಾನುಭೂತಿ ಮತ್ತು ಸಮುದಾಯ ಸೇವೆಯಲ್ಲಿ ಚಾಲಿತವಾಗಿರುವ ಅಕ್ಕ ಪಡೆ ಸಮಾಜದಲ್ಲಿ ಸ್ಪಂದಿಸುವ ಸುರಕ್ಷತ ಘಟಕವಾಗಿ ಮತ್ತು ಶೈಕ್ಷಣಿಕ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತಿದೆ.

**ಆಯ್ಕೆ ಮಾನದಂಡಗಳು:** ಎನ್ಸಿಸಿ "ಸಿ" ಪ್ರಮಾಣ ಪತ್ರ ಹೊಂದಿರುವ 35 ರಿಂದ 45 ವಯೋಮಿತಿಯ ಮಹಿಳಾ ಅಭ್ಯರ್ಥಿ ಆಗಿರಬೇಕು. ಅಭ್ಯರ್ಥಿಗಳು ದೈಹಿಕ ಸಧೃಡತೆ ಮತ್ತು ಸ್ಥಳೀಯ ನಿವಾಸಿ ಆಗಿರಬೇಕು. ಅಭ್ಯರ್ಥಿಗಳು ಬೆಳಿಗ್ಗೆ 7 ರಿಂದ ರಾತ್ರಿ 8 ಗಂಟೆಯವರೆಗೆ ಶಿಪ್ಟ್ ಕೆಲಸ ನಿರ್ವಹಿಸಲು ಬದ್ಧರಿರಬೇಕು. ಉತ್ತಮ ನಡುವಳಿಕೆ ಸಂವಾಹನ, ಕಲೆ, ಕಾರ್ಯದಕ್ಷತೆ ಉಳ್ಳವರಾಗಿರಬೇಕು. ಗುತ್ತಿಗೆ ಅವಧಿ 11 ತಿಂಗಳಿಗೆ ಸೀಮಿತವಾಗಿದ್ದು, ಕರ್ತವ್ಯನಿರ್ವಹಣೆ ತೃಪ್ತಿಕರವಾಗಿದ್ದಲ್ಲಿ ಸೇವೆಯನ್ನು ಮುಂದುವರಿಸಲಾಗುವುದು.

**ದಾಖಲಾತಿಗಳು:** ನಿಗದಿತ ನಮೂನೆ ಭರ್ತಿ ಮಾಡಿದ ಅರ್ಜಿ, ಎನ್ಸಿಸಿ "ಸಿ" ಪ್ರಮಾಣಪತ್ರ, ಸೇವಾ ಪ್ರಮಾಣ ಪತ್ರ, ಆಧಾರ ಕಾರ್ಡ, ವಾಸಸ್ಥಳ ಪ್ರಮಾಣ ಪತ್ರ, ದೈಹಿಕ ಸದೃಡತೆ ಪ್ರಮಾಣ ಪತ್ರದೊಂದಿಗೆ ನವೆಂಬರ್ 12ರೊಳಗಾಗಿ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂತ್ರಾಲಯ ರೋಡ್ ಐ.ಡಿ.ಎಸ್.ಎಮ್.ಟಿಲೇಔಟ್ ಎದುರು ಗಡೆ ರಾಯಚೂರು ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ದೂರವಾಣಿ ಸಂಖ್ಯೆ: 08532295646ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು: ಆಯುಕ್ತ ದೇವರಾಜು



ಯುವ ಮಾರ್ಗ ಸುದ್ದಿ

**ರಾಯಚೂರು,ನ.5–** ರಾಯಚೂರಿನ ಮಹಾನಗರ ಪಾಲಿಕೆಯ ಆಸ್ತಿಗಳಾದ ಕೋಟೆ, ಕಂದಕ, ತೀನ್ ಕಂದೀಲ್ ಸೇರಿದಂತೆ ಇತರೆ ಸ್ಥಳಗಳಿಗೆ ಭೇಟಿ ನೀಡಲಾಗಿದ್ದು, ಮುಂದಿನ ದಿನಗಳಲ್ಲಿ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಪ್ರವಾಸಿಗರ ಸಂಖ್ಯೆಯನ್ನು ಹೆಚ್ಚಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ರಾಜ್ಯ ಪುರಾತತ್ವ ಇಲಾಖೆಯ ಆಯುಕ್ತರಾದ ದೇವರಾಜು ಅವರು ಹೇಳಿದರು.

ನವೆಂಬರ್ 04ರ ಮಂಗಳವಾರ ದಂದು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ರಾಯಚೂರಿನಲ್ಲಿರುವ ಕೋಟೆಯ ಹೊರಗಡೆ ಹಾಗೂ ಒಳಗಡೆ ವಾಸಮಾಡುವ ಮಾಲೀಕರಿಗೆ ಇ–ಖಾತ ವಿತರಿಸುವ ಕುರಿತು ಸಂಬಂಧಿಸಿದಂತೆ 6–8 ತಿಂಗಳಿನಿಂದ ಚರ್ಚೆ ಮಾಡಲಾಗುತ್ತಿದೆ. ಇದಕ್ಕಾಗಿ ಇಲಾಖೆಯ ಕಾನೂನು ರೀತಿಯಲ್ಲಿ ಹೇಗೆ ಪರಿಹಾರ ನೀಡಬೇಕು ಎಂದು ಚರ್ಚೆ ನಡೆಸಲಾಗಿದ್ದು, ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಒತ್ತಾಯ ಮೇರಿಗೆ ಸ್ಥಳಗಳನ್ನು ಪರಿಶೀಲನೆ ಮಾಡಲಾಗಿದೆ ಎಂದರು.

ಕೋಟೆಯ ಸುತ್ತಮುತ್ತಲಿನ ಐತಿಹಾಸಿಕ ಸ್ಥಳಗಳ ವೀಕ್ಷಣೆ ಮಾಡಲಾಗಿದ್ದು, ಮುಖ್ಯವಾಗಿ ನಗರದ ನವರಂಗ ದರ್ವಾಜ್ ಹಾಗೂ ಪುರತತ್ವ ಇಲಾಖೆಯ ವಸ್ತು ಸಂಗ್ರಹಾಲಯ, ತೀನ್ ಕಂದಿಲ್, ಕಾಸಭಾವಿ, ಅಮ್ ತಲಾಬ್ ಸೇರಿದಂತೆ ರಾಯಚೂರಿನ ಕೋಟೆಯ ಕಂದಕಗಳನ್ನು ವೀಕ್ಷಣೆ ಮಾಡಲಾಗಿದೆ. ರಾಜ್ಯದಲ್ಲಿ ಸುಮಾರು 800ಕ್ಕೂ ಹೆಚ್ಚು ರಾಜ್ಯ ಸಂರಕ್ಷಿತ ಸ್ಮಾರಕಗಳು ಇವೆ. ಅದರಲ್ಲಿ ಶೇಕಡ 50ರಷ್ಟು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಂಡುಬರುತ್ತವೆ. ಇವುಗಳ ಸಂಖ್ಯೆ ಅನುಗುಣವಾಗಿ ಇನ್ನೂ ಇಲಾಖೆಯಿಂದ ಆದ್ಯತೆ ನೀಡಬೇಕು. ಅದಕ್ಕಾಗಿ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಕೋಟೆಯಲ್ಲಿ ಪಾಲಿಕೆ ಅನುದಾನದಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಅವಕಾಶ ನೀಡಲಾಗುವುದು. ಜೆಸ್ಕಾಂ ಇಲಾಖೆ ಪಕ್ಕದಲ್ಲಿ ಮುಖ್ಯ ಪ್ರವೇಶ ದ್ವಾರ ಮಾಡಲಾಗುತ್ತದೆ. ಅಲ್ಲದೆ ರಸ್ತೆಯ ಪಕ್ಕದಲ್ಲಿ ಕೋಟೆಯ ಚಿತ್ರವನ್ನು ಬಿಡಿಸಿ ಪ್ರವಾಸಿಗರನ್ನು ಆಕರ್ಷಣೆ ಮಾಡಲಾಗುತ್ತದೆ ಎಂದರು.

ಕೆಲವು ಪ್ರದೇಶದವು ಒತ್ತೂರಿಯಾಗಿದ್ದು, ಅಲ್ಲಿ ಶಾಪ್ಗಳನ್ನು ಮಾಡಲಾಗಿದೆ. ಶಾಪ್‌ಗಳಿಂದ ಸ್ಮಾರಕ ಆಕರ್ಷಣೆಗೆ ಅಡ್ಡಿಯಾಗಿದೆ. ಪಾಲಿಕೆಯಿಂದ ಹಾಗೂ ಇಲಾಖೆ ವತಿಯಿಂದ ತೆರವು ಕಾರ್ಯ ನಡೆಸಿ, ಸ್ಮಾರಕಗಳನ್ನು ಇನ್ನಷ್ಟು ಆಕರ್ಷಣೆ ಮಾಡಲು ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಇದಕ್ಕೆ ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳು ಸಹಕಾರ ನೀಡಬೇಕೆಂದು ಹೇಳಿದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಪುರತತ್ವ ಇಲಾಖೆಯಿಂದ ಪಾಲಿಕೆ ವ್ಯಾಪ್ತಿ ಸೇರಿದಂತೆ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಇಲಾಖೆ ಮುಖ್ಯಸ್ಥರಿಂದ ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದು ಜಿಲ್ಲೆಯಲ್ಲಿ ಹಲವು ಪ್ರವಾಸಿ ತಾಣಗಳನ್ನು ವೀಕ್ಷಣೆ ಮಾಡಲಾಗಿದ್ದು ಅವುಗಳನ್ನು ಮುಂದಿನ ದಿನಗಳಲ್ಲಿ ಪಾಲಿಕೆ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲಾಗುತ್ತದೆ ಎಂದರು.

ಬೆಂಗಳೂರಿನ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರ ಸುತ್ತೋಲೆ ಹಿನ್ನಲೆಯಲ್ಲಿ ಅಧಿಕೃತ ಆಸ್ತಿಗಳಿಗೆ ಎ–ಖಾತಾ ಮತ್ತು ಬಿ–ಖಾತಾ ಪಡೆಯಲು ಅಗತ್ಯ ದಾಖಲಾತಿಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುವುದು. ಅಲ್ಲದೆ ಪೌರ ಸುಧಾರಣಾ ಕೋಶದಿಂದ ರಾಷ್ಟ್ರೀಯ ಸೂಚ್ಯಾಂಕ ಕೇಂದ್ರದ ಸಹಯೋಗದೊಂದಿಗೆ ಇ–ಆಸ್ತಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಇನ್ನು ಕೆಲವೇ ದಿನಗಳಲ್ಲಿ ಈ ತಂತ್ರಾಂಶವನ್ನು ಲೋಕಾರ್ಪಣೆ ಮಾಡಲಾಗುವುದು. ಈ ತಂತ್ರಾಂಶದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಅಧಿಕೃತ, ಅಧಿಕೃತವಲ್ಲದ ಮತ್ತು ಅಕ್ರಮ ಆಸ್ತಿಗಳ ಮಾಹಿತಿಯನ್ನು ದಾಖಲಿಸಲು/ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಇಲಾಖೆಯ ಪ್ರಕರಣ 26ರ ತಿದ್ದುಪಡಿ ಮೂಲ ಅಧಿನಿಯಮದಡಿ ಮೂರು ತಿಂಗಳುಗಳಿಗೆ ಎಂಬ ಪದಗಳ ಬದಲಿಗೆ ಎರಡು ವರ್ಷಗಳವರೆಗೆ ಹಾಗೂ ಎರಡು ಸಾವಿರ ರೂಪಾಯಿಗಳಿಗೆ ಎಂಬ ಪದಗಳ ಬದಲಿಗೆ ಒಂದು ಲಕ್ಷ ರೂಪಾಯಿಗಳಿಗೆ ಎಂಬ ಪದಗಳನ್ನು ಸೇರಿಸಲಾಗಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದೆಂದರು.

ಪಾಲಿಕೆಯ ಪ್ರಗತಿ ಕುರಿತು ಸಭೆ: ಇದಕ್ಕೂ ಮೊದಲು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ ಹಾಗೂ ರಾಜ್ಯ ಪುರಾತತ್ವ ಇಲಾಖೆಯ ಆಯುಕ್ತರಾದ ದೇವರಾಜು ಅವರು ಅಧ್ಯಕ್ಷತೆಯಲ್ಲಿ ರಾಯಚೂರು ಮಹಾನಗರ ಪಾಲಿಕೆಯ ವಿವಿಧ ಅಭಿವೃದ್ಧಿ ಹಾಗೂ ನಗರ ಸೌಂದರ್ಯ ಹೆಚ್ಚಿಸುವ ಸಲುವಾಗಿ ಸಭೆ ಮಾಡಲಾಯಿತು.

ಸಭೆಯಲ್ಲಿ ನವರಂಗ ದರ್ವಾಜ್ ಹಾಗೂ ಪುರತತ್ವ ಇಲಾಖೆಯ ವಸ್ತು ಸಂಗ್ರಹಾಲಯ, ತೀನ್ ಕಂದಿಲ್, ಕಾಸಭಾವಿ, ಅಮ್ ತಲಾಬ್, ಮಾವಿನ ಕೆರೆ ಅಭಿವೃದ್ಧಿ ಕುರಿತು ಸುರ್ಧಿಘ ಚರ್ಚಿಸಲಾಯಿತು.

ಕೋಟೆ ವೀಕ್ಷಣೆ: ಪತ್ರಿಕಾಗೋಷ್ಠಿಗೂ ಮೊದಲು ನಗರದ ನವರಂಗ್ ಧರ್ವಾಜ್ ಕೋಟೆಗೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿ ಕಾಮಗಾರಿಯು ಗುಣಮಟ್ಟ ಹಾಗೂ ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದವರಿಗೆ ಸೂಚನೆ ನೀಡಲಾಯಿತು.

ಇದೇ ಸಂದರ್ಭದಲ್ಲಿ ಪುರಾತತ್ವ ಇಲಾಖೆಯ ವಿವಿಧ ಅಧಿಕಾರಿಗಳು ಹಾಗೂ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು ಇದ್ದರು.

## ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿಕೊಂಡ ಚೀನಿ ಸಿಬ್ಬಂದಿ



**ಬೀಜಿಂಗ್,ನ.5–** ಬಾಹ್ಯಾಕಾಶ ನಿಲ್ದಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳ ವಾಪಸಾತಿಯನ್ನು ಸಣ್ಣ ಬಾಹ್ಯಾಕಾಶ ಶಿಲಾಖಂಡರಾಶಿಗಳ ಶಂಕಿತ ಪರಿಣಾಮದಿಂದಾಗಿ ಮುಂದೂಡಲಾಗಿದೆ ಎಂದು ಚೀನಾ ಮಾನವಸಹಿತ ಬಾಹ್ಯಾಕಾಶ ಸಂಸ್ಥೆ (ಸಿಎಂಎಸ್‌ಎ) ಇಲ್ಲಿ ಪ್ರಕಟಿಸಿದೆ.

ಗಗನಯಾತ್ರಿಗಳ ಸುರಕ್ಷತೆ ಮತ್ತು ಕಾರ್ಯಾಚರಣೆಯ ಯಶಸ್ಸನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ವಾಪಸಾತಿಯನ್ನು ವಿಳಂಬಗೊಳಿಸುವ ನಿರ್ಧಾರ ಹೊಂದಿದೆ ಎಂದು ಸಂಸ್ಥೆ ತಿಳಿಸಿದೆ.

ಚೀನಾ ಪ್ರತಿ ಆರು ತಿಂಗಳಿಗೊಮ್ಮೆ ನಿಲ್ದಾಣದ ಸಿಬ್ಬಂದಿಯನ್ನು ಬದಲಾಯಿಸುತ್ತದೆ.ಶನಿವಾರ, ಸಿಬ್ಬಂದಿಯನ್ನು ಹೊತ್ತ ಶೆನ್‌ಝೌ–20 ಬಾಹ್ಯಾಕಾಶ ನೌಕೆಯು ಶೆನ್‌ಝೌ–21 ಸಿಬ್ಬಂದಿಯೊಂದಿಗೆ ತನ್ನ ಕಕ್ಷೆಯೊಳಗೆ ಹಸ್ತಾಂತರವನ್ನು ಪೂರ್ಣಗೊಳಿಸಿತು ಮತ್ತು ಇಂದು ಭೂಮಿಗೆ ಮರಳಲು ನಿರ್ಧರಿಸಲಾಗಿತ್ತು.

ನಿಲ್ದಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಮೂವರು ಸದಸ್ಯರ ಸಿಬ್ಬಂದಿ ಹಸ್ತಾಂತರ ಸಮಾರಂಭವನ್ನು ನಡೆಸಿ ಮಂಗಳವಾರ ಬಾಹ್ಯಾಕಾಶ ನಿಲ್ದಾಣದ ಕೀಲಿಗಳನ್ನು ವರ್ಗಾಯಿಸಿದರು. ಇಲ್ಲಿಯವರೆಗೆ, ಶೆನ್‌ಝೌ–20 ತ್ರಿಮೂರ್ತಿಗಳಾದ ಚೆನ್ ಡಾಂಗ್, ಚೆನ್ ಝೊಂಗ್ರುಯಿ ಮತ್ತು ವಾಂಗ್ ಜೀ ತಮ್ಮ ಎಲ್ಲಾ ಯೋಜಿತ ಕಾರ್ಯಗಳನ್ನು ಪೂರ್ಣಗೊಳಿಸಿದ್ದಾರೆ ಮತ್ತು ಇಂದು ಉತ್ತರ ಚೀನಾದ ಇನ್ನರ್ ಮಂಗೋಲಿಯಾ ಸ್ವಾಯತ್ತ ಪ್ರದೇಶದ ಡಾಂಗ್‌ಫೆಂಗ್ ಲ್ಯಾಂಡಿಂಗ್ ಸೈಟ್‌ಗೆ ಮರಳಲು ಸಿದ್ಧರಾಗಿದ್ದರು ಎಂದು ಅಧಿಕೃತ ಮಾಧ್ಯಮ ವರದಿಗಳು ತಿಳಿಸಿವೆ. ಆದರೆ, ಅವರ ವಾಪಸಾತಿಯನ್ನು ಸದ್ಯ ಮುಂದೂಡಲಾಗಿದೆ.

ಚೀನಾ ಕಳೆದ ಶುಕ್ರವಾರ ಶೆನ್‌ಝೌ–21 ಸಿಬ್ಬಂದಿ ಬಾಹ್ಯಾಕಾಶ ನೌಕೆಯನ್ನು ಉಡಾವಣೆ ಮಾಡಿತು, ಆರು ತಿಂಗಳ ಕಾರ್ಯಾಚರಣೆಯಲ್ಲಿ ಮೂರು ಗಗನಯಾತ್ರಿಗಳನ್ನು ತನ್ನ ಕಕ್ಷೆಯಲ್ಲಿರುವ ಬಾಹ್ಯಾಕಾಶ ನಿಲ್ದಾಣಕ್ಕೆ ಕಳುಹಿಸಿತು.

# ಡಿಕೆಶಿ ದೆಹಲಿಗೆ ಕುತೂಹಲಕ್ಕೆಡೆ

**ಬೆಂಗಳೂರು, ನ. 5–** ಸಂಪುಟ ಪುನರ್‌ರಚನೆ ಅಧಿಕಾರ ಹಂಚಿಕೆ ನವೆಂಬರ್ ಕ್ರಾಂತಿ ನಡೆಯಲಿದೆ ಎಂಬ ಚರ್ಚೆಗಳ ನಡುವೆಯೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ದೆಹಲಿ ಪ್ರವಾಸ ಕೈಗೊಂಡಿರುವುದು ನಾನಾ ವ್ಯಾಖ್ಯಾನಗಳಿಗೆ ಎಡೆಮಾಡಿಕೊಟ್ಟಿದೆ.

ಮುಖ್ಯಮಂತ್ರಿ ಬದಲಾವಣೆ ಕುರಿತು ಕಾಂಗ್ರೆಸ್ ಪಾಳಯದಲ್ಲಿ ವ್ಯಾಪಕ ಚರ್ಚೆಗಳು ನಡೆಯುತ್ತಿವೆ. ಈ ವಿದ್ಯಮಾನಗಳ ಬೆನ್ನಲ್ಲೇ ಡಿ.ಕೆ. ಶಿವಕುಮಾರ್ ದೆಹಲಿ ಭೇಟಿ ಕೈಗೊಂಡಿರುವುದು ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ. ಮಧ್ಯಾಹ್ನ 3 ಗಂಟೆ ದೆಹಲಿಗೆ ತೆರಳಲಿರುವ ಡಿ.ಕೆ. ಶಿವಕುಮಾರ್ ನೀರಾವರಿ ವಿಚಾರಕ್ಕೆ ಸಂಬಂಧಿಸಿದಂತೆ ವಕೀಲರೊಂದಿಗೆ ಚರ್ಚೆ ನಡೆಸುವ ಸಲುವಾಗಿ ಈ ಭೇಟಿ ಕೈಗೊಂಡಿದ್ದಾರೆ ಎಂದು ಹೇಳಲಾಗಿದೆ. ಆದರೆ ಇಂದು ದೆಹಲಿಯ ಕರ್ನಾಟಕ ಭವನದಲ್ಲೇ ವಾಸ್ತವ್ಯ ಹೂಡಲಿದ್ದು, ನಾಳೆ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಜ್ಯ ರಾಜಕಾರಣದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ಚರ್ಚೆಗಳು ನಡೆದಿರುವಾಗಲೆ ಡಿ.ಕೆ. ಶಿವಕುಮಾರ್‌ರವರ ದೆಹಲಿ ಭೇಟಿ ಮಹತ್ವ ಪಡೆದುಕೊಂಡಿದೆ. ಸಂಪುಟ ಪುನರ್‌ರಚನೆ ಸಂಬಂಧ ಈ ತಿಂಗಳ 14 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ನಾಯಕಿ ಸೋನಿಯಾ ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭೇಟಿ ಮಾಡುವುದಾಗಿ ಹೇಳಿಕೆ ನೀಡಿದ ಬೆನ್ನಲ್ಲೇ ಡಿ.ಕೆ. ಶಿವಕುಮಾರ್ ದೆಹಲಿಗೆ ತೆರಳುತ್ತಿದ್ದಾರೆ.

ಸಂಪುಟ ಪುನರ್‌ರಚನೆ, ಅಧಿಕಾರ ಹಂಚಿಕೆ ಕುರಿತಂತೆ ಕಾಂಗ್ರೆಸ್ ಮುಖಂಡರು ಭಿನ್ನ ವಿಭಿನ್ನ ಹೇಳಿಕೆ ನೀಡುತ್ತಿದ್ದು, ಸದ್ಯಕ್ಕೆ ಮುಖ್ಯಮಂತ್ರಿ ಕುರ್ಚಿ ಖಾಲಿಯಿಲ್ಲ. 5 ವರ್ಷಗಳ ಕಾಲ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂಬ ಹೇಳಿಕೆಗಳು ಗೊಂದಲ ಸೃಷ್ಟಿಸಿವೆ.

ಈ ಬೆಳವಣಿಗೆ ನಡುವೆ ಪ್ರತಿಕ್ರಿಯೆ ನೀಡಿರುವ ಗೃಹ ಸಚಿವ ಜಿ. ಪರಮೇಶ್ವರ್ ದೆಹಲಿಗೆ ಯಾರು ಹೋಗುತ್ತಾರೆ ಗೊತ್ತಿಲ್ಲ. ತಾವಂತೂ ಸದ್ಯಕ್ಕೆ ದೆಹಲಿಗೆ ತೆರಳುತ್ತಿಲ್ಲ. ಅವಶ್ಯಕತೆ ಬಿದ್ದರೆ ದೆಹಲಿಗೆ ತೆರಳುವುದಾಗಿ ಹೇಳಿದರು. ಸಂಪುಟದಿಂದ ಹಿರಿಯ ಸಚಿವರನ್ನು ಕೈ ಬಿಡುವ ವಿಚಾರ ಹೈಕಮಾಂಡ್ ತೀರ್ಮಾನಿಸಿದೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.ನ. 14 ರಂದು ಸಿದ್ದರಾಮಯ್ಯ ಪ್ರವಾಸ ನಿಗದಿಯಾಗಿದ್ದು, ನ. 11ಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ದೆಹಲಿಯಲ್ಲೇ ಠಿಕಾಣಿ ಹೂಡಲಿದ್ದಾರೆ ಎಂದು ಹೇಳಲಾಗಿದೆ. ಈ ಬೆಳವಣಿಗೆಗಳ ಮಧ್ಯೆ ಸಚಿವ ಸತೀಶ್ ಜಾರಕಿ ಹೊಳಿ ದೆಹಲಿ ಪ್ರವಾಸ ಹಠಾತ್ ರದ್ದಾಗಿದೆ.

ಈ ತಿಂಗಳಲ್ಲೇ ಸಿದ್ದರಾಮಯ್ಯ ನೇತೃತ್ವದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಪೂಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಅಧಿಕಾರ ಹಂಚಿಕೆ ಸಂಪುಟ ಪುನರ್‌ರಚನೆ ಕುರಿತಂತೆ ನಡೆಯಲಿರುವ ಬೆಳವಣಿಗೆಗಳು ಬಿಹಾರ ಚುನಾವಣೆಯ ನಂತರ ಮತ್ತಷ್ಟು ಚುರುಕುಗೊಳ್ಳಲಿವೆ ಎಂದು ಮೂಲಗಳು ತಿಳಿಸಿವೆ.

# ನವೆಂಬರ್ ತಿಂಗಳು ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ

ಯುವ ಮಾರ್ಗ ಸುದ್ದಿ

**ರಾಯಚೂರು,ನ.5–** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಪ್ರತಿ ವರ್ಷವು ನವೆಂಬರ್ ತಿಂಗಳನ್ನು ಅಂತಾರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಅಮರೇಶ ಹರಿವಿ ಅವರು ತಿಳಿಸಿದ್ದಾರೆ.

ಘಟಕದ ವತಿಯಿಂದ 0–18 ವರ್ಷದೊಳಗಿನ ಮಕ್ಕಳ ಪೋಷಣೆ ಮತ್ತು ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿದೆ. ಅದರಂತೆ ಬಾಲನ್ಯಾಯ ಕಾಯ್ದೆ–2025 ಹಾಗೂ ದತ್ತು ಮಾರ್ಗಸೂಚಿಯನ್ವಯ ಮಕ್ಕಳ ಕಲ್ಯಾಣ ಸಮಿತಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಕಾನೂನಿನಾತ್ಮಕವಾಗಿ ದತ್ತು ಪ್ರಕ್ರಿಯೆ ಮೂಲಕ ಮಕ್ಕಳನ್ನು ಕಾನೂನಿನಾತ್ಮಕ ದತ್ತು ನೀಡಲಾಗುತ್ತದೆ.

ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು, ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತವರಣವು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಪುರ್ನವಸತಿಗೆ ನೆರವಾಗುವುದು ಮಕ್ಕಳ ರಕ್ಷಣಾ ಯೋಜನೆಯ ಉದ್ದೇಶವಾಗಿರುತ್ತದೆ.

ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಪ್ರತಿ ವರ್ಷವು ನವೆಂಬರ್ ತಿಂಗಳನ್ನು "ಅಂತಾರಾಷ್ಟ್ರೀಯ ದತ್ತು ಮಾಸಾಚರಣೆ–2025ರ ಈ ಬಾರಿಯ ಘೋಷವಾಕ್ಯ ವಿಶೇಷ ಅಗತ್ಯವಿರುವ ಮಕ್ಕಳನ್ನು ದತ್ತು ಪಡೆಯುವುದೊಂದಿಗೆ ಆಚರಿಸಲಾಗುತ್ತಿದ್ದು, ಯಾವುದೇ ವ್ಯಕ್ತಿ ಕಾನೂನು ಬಾಹಿರವಾಗಿ, ಯಾವುದೇ ಮಗುವನ್ನು ಅನಧಿಕೃತವಾಗಿ ದತ್ತು ಪಡೆಯುವುದು ಅಥವಾ ಮಾರಾಟ ಮಾಡುವುದು ಬಾಲನ್ಯಾಯ (ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015ರ ಸೆಕ್ಷನ್ 81ರನ್ವಯ 05 ವರ್ಷಗಳವರೆಗಿನ ಕಠಿಣ ಕಾರಗೃಹ ಶಿಕ್ಷೆ ಮತ್ತು 01 ಲಕ್ಷ ರೂ.ದಂಡದವರೆಗೆ ಶಿಕ್ಷೆಗೆ ಒಳಪಡುತ್ತಾರೆ.

ಮಕ್ಕಳನ್ನು ಕಾನೂನಿನಾತ್ಮಕ ದತ್ತು ಪಡೆಯಲು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಾರ್ಯಾಲಯ ಮನೆ. ಸಂಖ್ಯೆ. 1–9–138 ಪಶ್ಚಿಮ ಪೊಲೀಸ್ ಠಾಣೆ ಹಿಂದೆ, ಮಾರೆಮ್ಮ ದೇವಸ್ಥಾನ ಎದುರುಗಡೆ, ಗೋಲ್ ಮಾರ್ಕೆಟ್, ಆಜಾದನಗರ ರಾಯಚೂರು–584101 ಅಥವಾ ದೂರವಾಣಿ ಸಂಖ್ಯೆ: 08532–226226ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಧಾನಿ ಮೋದಿ ಬೆಂಬಲದಿಂದಾಗಿ ಕ್ರೀಡೆಯಲ್ಲಿ ಭಾರತಕ್ಕೆ ಜಾಗತಿಕ ಮನ್ನಣೆ

**ನವದೆಹಲಿ,ನ.5–** ಪ್ರಧಾನಿ ನರೇಂದ್ರಮೋದಿ ನೇತೃತ್ವದಲ್ಲಿ ಕ್ರಿ?ಡೆಗಳಿಗೆ ಹಿಂದಿನ ಸರಕಾರಕ್ಕಿಂತಲೂ ಹೆಚ್ಚಿನ ಬೆಂಬಲ, ಸೂಕ್ತ ಅನುದಾನ ನೀಡುತ್ತಿರುವ ಪರಿಣಾಮ ಭಾರತದ ಕ್ರಿ?ಡಾಪಟುಗಳು ಜಾಗತಿಕವಾಗಿ ಹೊರಹೊಮ್ಮುತ್ತಿದ್ದು, ಯಾವುದೇ ಕ್ರಿಡೆಗೂ ನಾವು ಸನ್ನದ್ದರಾಗಿದ್ದೇವೆ ಎಂಬ ಸಂದೇಶ ರವಾನಿಸುತ್ತಿದ್ದಾರೆ.

ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಕಳೆದ 11 ವರ್ಷಗಳಲ್ಲಿ ಭಾರತದ ಕ್ರೀಡಾ ವ್ಯವಸ್ಥೆಯು ಸಂಪೂರ್ಣವಾಗಿ ಬದಲಾಗಿದೆ. ದೇಶೀಯವಾಗಿ ಮತ್ತು ಜಾಗತಿಕವಾಗಿಕ್ರೀಡಾಗಳಲ್ಲಿ ದೇಶದ ಪ್ರಯಾಣವು ಈಗ ಸ್ಥಿರವಾದ ಫಲಿತಾಂಶಗಳನ್ನು ನೀಡುತ್ತಿದೆ.

ಜಾಗತಿಕ ಕ್ರೀಡಾಕೂಟಗಳಲ್ಲಿ ಭಾರತದ ಉಪಸ್ಥಿತಿ, ಕ್ರೀಡಾಗಳನ್ನು ರಾಷ್ಟ್ರಿಯ ಗುರುತು ಮತ್ತು ಮಹತ್ವಾಕಾಂಕ್ಷೆಯ ಸಂಕೇತವಾಗಿ ಪರಿವರ್ತಿಸುತ್ತದೆ. ಖೇಲೋ ಇಂಡಿಯಾ, ಟಾಪ್, ಫಿಟ್ ಇಂಡಿಯಾ, ಮತ್ತು ಖೇಲೋ ಭಾರತ್‌ನಂತಹ ಉಪಕ್ರಮಗಳು ತಳಮಟ್ಟದ ಪ್ರತಿಭೆಯನ್ನು ಪೋಷಿಸಿದೆ, ಕ್ರಿಡಾಪಟುಗಳಿಗೆ ಮೂಲಸೌಕರ್ಯ ಅಭಿವೃದ್ಧಿ, ಹೆಚ್ಚಿದ ಬಜೆಟ್ ಮತ್ತು ಕೇಂದ್ರಿಕೃತ ಉಪಕ್ರಮಗಳನ್ನು ಸಂಯೋಜಿಸುತ್ತದೆ. ಇಂದು, ಕ್ರೀಡಾಗಳು ಭಾರತದ ಬೆಳವಣಿಗೆಯ ಅವಿಭಾಜ್ಯವಾಗಿದೆ.


ಪ್ರಧಾನಿ ಮೋದಿಯವರ ಕ್ರಿಡಾ ದೃಷ್ಟಿಕೋನವು ಪದಕಗಳನ್ನು ಗೆಲ್ಲುವುದನ್ನು ಮೀರಿ ವಿಸ್ತರಿಸಿದೆ, ಇದು ಯುವಕರನ್ನು ಕ್ರೀಡಾಗಳತ್ತ ಆಕರ್ಷಿಸುವಂತೆ ಮಾಡಿದೆ. ಪ್ರತಿಭೆ ಗುರುತಿಸುವಿಕೆಯು ಸಣ್ಣ ಪಟ್ಟಣಗಳು ಮತ್ತು ಹಳ್ಳಿಗಳಿಂದ ವ್ಯಾಪಿಸಿದೆ. ಈಗ 1,057 ಖೇಲೋ ಇಂಡಿಯಾ ಕೇಂದ್ರಗಳು ಮತ್ತು 34 ಸ್ಟೇಟ್ ಸೆಂಟರ್ ಆಫ್ ಎಕ್ಸಲೆನ್ಸ್ ಇವೆ, ಅಲ್ಲಿ ಮಾಜಿ ಚಾಂಪಿಯನ್‌ಗಳು ಭವಿಷ್ಯದ ಕ್ರಿ?ಡಾಪಟುಗಳಿಗೆ ತರಬೇತಿ ನೀಡುತ್ತಾರೆ, ಕೌಶಲ್ಯ ಮತ್ತು ಕ್ರಿಡಾ ವಿಜ್ಞಾನ ಎರಡನ್ನೂ ಕೇಂದ್ರಿಕರಿಸುತ್ತಾರೆ.

ಖೇಲೋ ಇಂಡಿಯಾ ರೈಸಿಂಗ್ ಟ್ಯಾಲೆಂಟ್ ಐಡೆಂಟಿಫಿಕೇಶನ್ ಕಾರ್ಯಕ್ರಮವು 1.8 ಲಕ್ಷಕ್ಕೂ ಹೆಚ್ಚು ಮೌಲ್ಯಮಾಪನಗಳನ್ನು ನಡೆಸಿದೆ. ವರ್ಷದೊಳಗಿನ ಭಾರತದ ಜನಸಂಖ್ಯೆಯ 65%ರೊಂದಿಗೆ, ಕ್ರೀಡೆಗಳನ್ನು ಯುವ ಸಬಲೀಕರಣದ ಮೂಲ ಸ್ತಂಭವನ್ನಾಗಿ ಮಾಡಲಾಗಿದೆ.ಕ್ರಿಡೆಗಳ ಯಶಸ್ಸಿಗಾಗಿ ಮೋದಿ ಸರ್ಕಾರವು ಕ್ರಿ?ಡಾ ಮೂಲಸೌಕರ್ಯದಲ್ಲಿ ಹೂಡಿಕೆಗೆ ಆದ್ಯತೆ ನೀಡಿದೆ. 2025–26 ಕ್ಕೆ, ಸಚಿವಾಲಯವು 3,794 ಕೋಟಿಗಳ ದಾಖಲೆಯ ಹಂಚಿಕೆಯನ್ನು ಸ್ವಿಕರಿಸಿದೆ.3,074 ಕೋಟಿ ಹೂಡಿಕೆಯನ್ನು ಒಳಗೊಂಡಿರುವ 323 ಹೊಸ ಕ್ರೀಡಾ ಮೂಲಸೌಕರ್ಯ ಯೋಜನೆಗಳನ್ನು ಭಾರತದಾದ್ಯಂತ ಅನುಮೋದಿಸಲಾಗಿದೆ.

ಖೇಲೋ ಇಂಡಿಯಾ ಮತ್ತು ಟಾರ್ಗೆಟ್ ಒಲಿಂಪಿಕ್ ಪೋಡಿಯಂ ಸ್ಕಿಮ್ ನಂತಹ ಪ್ರಮುಖ ಉಪಕ್ರಮಗಳು ಭಾರತದ ಸಂಪೂರ್ಣ ಕ್ರೀಡಾ ಪರಿಸರ ವ್ಯವಸ್ಥೆಯನ್ನು ಪುನರ್ರಚಿಸಿದೆ, ರಾಷ್ಟವನ್ನು ಕ್ರಿಡಾ ಶ್ರೆ?ಷ್ಠತೆಗೆ ಆಳವಾಗಿ ಬದ್ಧಗೊಳಿಸಿದೆ. ಅಂತಾರಾಷ್ಟ್ರಿಯ ಪಂದ್ಯಾವಳಿಗಳು ಮತ್ತು ತರಬೇತಿ ಕಾರ್ಯಕ್ರಮಗಳಿಗೆ ಧನಸಹಾಯದೊಂದಿಗೆ ಅವರಿಗೆ ಮಾಸಿಕ 50,000 ಸ್ಟೈಫಂಡ್ ಒದಗಿಸುತ್ತದೆ.

ಒಲಿಂಪಿಕ್ ಮಟ್ಟದ ಅಥ್ಲಿಟ್‌ಗಳನ್ನು ತಯಾರಿಸಲು, ಖೇಲೋ ಇಂಡಿಯಾ ಗೇಮ್ಸ್ ಅನ್ನು 2017ರಲ್ಲಿ ಪ್ರಾರಂಭಿಸಲಾಯಿತು, ಇದು ನಗರ ಮಾತ್ರವಲ್ಲದೆ ಗ್ರಾಮೀಣ ಪ್ರದೇಶಗಳಲ್ಲಿಯೂ ಸಹ, ಶಾಲಾ ಮತ್ತು ಕಾಲೇಜು ಮಟ್ಟದ ಕ್ರೀಡಾಪಟುಗಳಿಗೆ ಮಾನ್ಯತೆ ಮತ್ತು ವೃತ್ತಿಪರ ತರಬೇತಿಗಾಗಿ ವೇದಿಕೆಯನ್ನು ಒದಗಿಸುತ್ತದೆ. ಕೇವಲ ಎಂಟು ವರ್ಷಗಳಲ್ಲಿ, ಖೇಲೋ ಇಂಡಿಯಾ ಗೇಮ್ಸ್‌ನ 19 ಆವೃತ್ತಿಗಳು ವಿವಿಧ ಹಂತಗಳಲ್ಲಿ ನಡೆದಿವೆ.

2022ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತವು 28 ಚಿನ್ನ ಸೇರಿದಂತೆ 107 ಪದಕಗಳನ್ನು ಗೆದ್ದಿದೆ, ಅವುಗಳಲ್ಲಿ ಹಲವು ಖೇಲೋ ಇಂಡಿಯಾ–ತರಬೇತಿ ಪಡೆದ ಕ್ರಿಡಾಪಟುಗಳಿಂದ. 2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ 28 ಕ್ರೀಡಾಪಟುಗಳು ಭಾರತವನ್ನು ಪ್ರತಿನಿಧಿಸಿದ್ದರು. ಇಲ್ಲಿಯವರೆಗೆ, ಖೇಲೋ ಇಂಡಿಯಾ ಅಥ್ಲಿಟ್‌ಗಳು ಸುಮಾರು 6,000 ರಾಷ್ಟ್ರಿಯ ದಾಖಲೆಗಳನ್ನು





ಮತ್ತು 1,400 ಅಂತರರಾಷ್ಟ್ರಿಯ ದಾಖಲೆಗಳನ್ನು ರಚಿಸಿದ್ದಾರೆ, ಇದು ಭಾರತದ ತಳಮಟ್ಟದ ಕ್ರೀಡಾಪ್ರಗತಿಯನ್ನು ಪ್ರದರ್ಶಿಸುತ್ತದೆ. 18. ಭಾರತವು ಟೋಕಿಯೊ ಒಲಿಂಪಿಕ್ಸ್‌ನಲ್ಲಿ 7 ಪದಕಗಳನ್ನು ಮತ್ತು ಪ್ಯಾರಿಸ್ ಒಲಿಂಪಿಕ್ಸ್ ನಲ್ಲಿ ಪ್ರಭಾವಶಾಲಿ 6 ಪದಕಗಳನ್ನು ಗೆದ್ದುಕೊಂಡಿತು, ಆದರೆ ಪ್ಯಾರಿಸ್ ಪ್ಯಾರಾಲಿಂಪಿಕ್ಸ್ ನಲ್ಲಿ 29 ಪದಕಗಳೊಂದಿಗೆ ತನ್ನ ಅತ್ಯುತ್ತಮ ಪ್ರದರ್ಶನವನ್ನು ಸಾಧಿಸಿದೆ.

ಭಾರತ ಮಹಿಳಾ ತಂಡ ಇತಿಹಾಸ ನಿರ್ಮಿಸಿದೆ. 2025ರ ಮಹಿಳಾ ಐಸಿಸಿ ವಿಶ್ವಕಪ್‌ನ ಫೈನಲ್‌ನಲ್ಲಿ ಟೀಮ್ ಇಂಡಿಯಾ ದಕ್ಷಿಣ ಆಫ್ರಿಕಾವನ್ನು 52 ರನ್‌ಗಳಿಂದ ಸೋಲಿಸಿತು, ಪಂದ್ಯಾವಳಿಯ 52 ವರ್ಷಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಪ್ರಶಸ್ತಿಯನ್ನು ಎತ್ತಿಹಿಡಿದಿದೆ. ಮೋದಿ ಸರ್ಕಾರವು ಕ್ರೀಡಾಗಳ ಬಗ್ಗೆ ಎಷ್ಟು ಪೂರ್ವಭಾವಿ ಮತ್ತು ಸಕಾರಾತಕವಾಗಿದೆ ಎಂಬುದನ್ನು ಈ ಗೆಲುವು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ.

ಯುವ ಮಾರ್ಗ

ಗುರುವಾರ: 06-11-2025

## ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ನ.5–**ಯರಗೇರಾದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಮೆಟ್ರಿಕ್ ನಂತರದ ಬಾಲಕರ ಮತ್ತು ಬಾಲಕಿಯರ ವಸತಿ ನಿಲಯಗಳನ್ನು 100ರ ಸಂಖ್ಯಾಬಲದೊಂದಿಗೆ ಪ್ರಾರಂಭಿಸಲಾಗಿದ್ದು, ಈ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಇಲ್ಲಿನ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2025–26ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ.

ದಾಖಲಾತಿಗಳು: ಹೊಸದಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಖಾತೆಯನ್ನು ಸೃಜನೆ ಮಾಡಿಕೊಳ್ಳಬೇಕು. ಖಾತೆಯನ್ನು ಸೃಜನೆ ಮಾಡಿಕೊಳ್ಳುವಾಗ ವಿದ್ಯಾರ್ಥಿಯು ಆಧಾರ್ ಕಾರ್ಡನ್ನು ಬಳಸಿಕೊಂಡು ಖಾತೆಯನ್ನು ಸೃಜನೆ ಮಾಡಿಕೊಳ್ಳುವುದು (ವಿದ್ಯಾರ್ಥಿಯ ಬ್ಯಾಂಕ್‌ಗೆ ಆಧಾರ್ ಕಾರ್ಡ್ ಸೀಡಿಂಗ್ ಆಗಿರಬೇಕು). ಎಸ್.ಎಸ್.ಪಿ. ವಿದ್ಯಾರ್ಥಿಯ ಐ.ಡಿ ಸಂಖ್ಯೆ (ನವೀಕರಣ ವಿದ್ಯಾರ್ಥಿಗಳಿಗೆ). ವಿದ್ಯಾರ್ಥಿ/ಪಾಲಕರ ಮೊಬೈಲ್ ಸಂಖ್ಯೆ, ಇ–ಮೇಲ್ ಐಡಿ ವಿದ್ಯಾರ್ಥಿಯ ಸಂಪೂರ್ಣ ವಿಳಾಸ. ಆರ್.ಡಿ. ಸಂಖ್ಯೆ ಹೊಂದಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ(ಚಾಲ್ತಿ ಇರುವ) ಪ್ರತಿ. ಕಾಲೇಜಿನಿಂದ ಪಡೆದ ವ್ಯಾಸಂಗ ಪ್ರಮಾಣ ಪತ್ರ ಪ್ರತಿ. ಎಸ್.ಎಸ್.ಎಲ್.ಸಿ. ನೋಂದಣಿ ಸಂಖ್ಯೆ ಮತ್ತು ವಿಶ್ವವಿದ್ಯಾಲಯಗಳು ನೀಡುವ ನೋಂದಣಿ ಸಂಖ್ಯೆ. ಹಿಂದಿನ ಸಾಲಿನಲ್ಲಿ ತೇರ್ಗಡೆಯಾದ ಕೋರ್ಸಿನ ಅಂಕಪಟ್ಟಿಯ ಪ್ರತಿಯೊಂದಿಗೆ ವಸತಿ ನಿಲಯಗಳಿಗೆ ಎಸ್.ಹೆಚ್.ಪಿ ತಂತ್ರಾಂಶ ವೆಬ್‌ಸೈಟ್ ವಿಳಾಸ: https:// https://shp.karnataka.gov.in/ ನಲ್ಲಿ ನವೆಂಬರ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಕಚೇರಿಯ ದೂರವಾಣಿ ಸಂಖ್ಯೆ: 080532–295603, 8762178819ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರುಕ್ಮಣೀ ಬಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಮಿಕ ಇಲಾಖೆಯಿಂದ ಸುರಕ್ಷತಾ ಕಿಟ್‌ಗಳ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು,ನ.5–**ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ವಿವಿಧ ಸುರಕ್ಷತಾ ಕಿಟ್‌ಗಳ ಸೌಲಭ್ಯಕ್ಕೆ ಅರ್ಹ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ವಿವಿಧ ತಾಲೂಕಗಳಲ್ಲಿ ಮೇಸನ್, ಎಲೆಕ್ಟ್ರಿಷಿಯನ್, ವೇಲ್ಡರ್, ಕಾರ್ಪೆಂಟರ್, ಪೇಂಟರ್ ಹಾಗೂ ಪ್ಲಂಬರ್ ಸೇಪ್ಟಿ ಕಿಟ್‌ಗಳನ್ನು ಕಾರ್ಮಿಕರು ಚಾಲ್ತಿಯಲ್ಲಿರುವ ಆಧಾರ್ ಕಾರ್ಡ್, ಗುರುತಿನ ಚೀಟಿ ಹಾಗೂ ಮೊಬೈಲ್ ಸಂಖ್ಯೆಯೊಂದಿಗೆ ಈ ಹಿಂದೆ ಯಾವುದಾದರು ಕಿಟ್ ಈ ಕಚೇರಿಯಿಂದ ಪಡೆಯದಿರುವ ಕುರಿತು ಸ್ವಯಂ ಘೋಷಣಾ ಪತ್ರದೊಂದಿಗೆ ಅರ್ಜಿಯನ್ನು ನವೆಂಬರ್ 25 ರೊಳಗಾಗಿ ಅಯಾ ತಾಲೂಕಿನ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ನಿಯಾಮಾನುಸಾರ ಮತ್ತು ಜೇಷ್ಠತೆ ಆಧಾರಾದ ಮೇಲೆ ಆಯ್ಕೆ ಮಾಡಿ ಕಿಟ್‌ಗಳನ್ನು ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನ್ವಿ ಪುರಸಬೆಯಿಂದ ಪಿಎಂ ಸ್ವನಿಧಿ ಯೋಜನೆಯಡಿ ಅರ್ಜಿ ಸಲ್ಲಿಸಲು ನ.28 ರವರೆಗೆ ಅವಧಿ ವಿಸ್ತರಣೆ

**ರಾಯಚೂರು,ನ.5–**ಜಿಲ್ಲೆಯ ಮಾನವಿ ಪುರಸಭೆಯಿಂದ ಕೇಂದ್ರ ಸರಕಾರದ ಪ್ರಧಾನಮಂತ್ರಿ ಬೀದಿ ಬದಿಗಳ ವ್ಯಾಪಾರಿಗಳ ಆತ್ಮ ನಿರ್ಭರ ನಿಧಿ (ಪಿಎಂ ಸ್ವನಿಧಿ 2.0) ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ನವೆಂಬರ್ 28ರವರೆಗೆ ಅವಧಿ ವಿಸ್ತರಿಸಲಾಗಿದೆ.

ಪುರಸಭೆಯ ವ್ಯಾಪ್ತಿಯ ಮಾರುಕಟ್ಟೆ, ರಸ್ತೆ ಪಕ್ಕ, ನೆಲದ ಮೇಲೆ, ತಳ್ಳುಬಂಡಿ, ತಲೆಮೇಲೆ ಒತ್ತು ಮಾರುವವರು. ಹೊಸದಾಗಿ ಬೀದಿ ಬದಿ ವ್ಯಾಪಾರ ಆರಂಭಿಸುವವರು ವಿಶೇಷ ಕಿರುಸಾಲ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಮೊದಲನೇ ಹಂತದಲ್ಲಿ 15 ಸಾವಿರ, ಎರಡನೇ ಹಂತದಲ್ಲಿ 25 ಸಾವಿರ ಹಾಗೂ ಮೂರನೇ ಹಂತದಲ್ಲಿ 50 ಸಾವಿರ ರೂ.ಗಳನ್ನು ಬ್ಯಾಂಕ್‌ಗಳ ಮೂಲಕ ಸಾಲ ನೀಡಲಾಗುತ್ತಿದ್ದು, ಅರ್ಹ ವ್ಯಾಪಾರಸ್ಥರು ಅಗತ್ಯ ದಾಖಲೆಗಳಾದ ಗುರುತಿನ ಚೀಟಿ, ರೇಷನ್ ಕಾರ್ಡ್, ಆಧಾರ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಫೋಟೋ, ಕುಟುಂಬದ ಫೋಟೋ, ವ್ಯಾಪಾರದ ಫೋಟೋ, ಜಾತಿ ಮತ್ತು ಅದಾಯ ಪ್ರಮಾಣ ಪತ್ರ ಹಾಗೂ ಇತರ ಅಗತ್ಯ ದಾಖಲೆಗಳೊಂದಿಗೆ ನವೆಂಬರ್ 28ರ ಸಂಜೆ 5ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಸಾಲ ಪಡೆದು ಆರ್ಥಿಕವಾಗಿ ಸದೃಢರಾಗಿ ಮತ್ತು ಡಿಜಿಟಲ್ ಪಾವತಿಯಿಂದ ಕ್ಯಾಶ್‌ಬ್ಯಾಕ್ ಪ್ರೋತ್ಸಾಹಧನ, ಎರಡನೇ ಕಂತಿನ ಸಾಲ ಪಡೆದು ಮರುಪಾವತಿಸಿದ ನಂತರ 30 ಸಾವಿರ ರೂಗಳ ಕ್ರೆಡಿಟ್ ಪಡೆದುಕೊಳ್ಳಬಹುದು. ನಿಗದಿತ ಕಾಲಾವಧಿಯಲ್ಲಿ ಕಂತುಗಳನ್ನು ಪಾವತಿಸಿದರೆ ಮಾತ್ರ ಬಡ್ಡಿ ಸಹಾಯಧನ ಸಿಗಲಿದೆ.ಹೆಚ್ಚಿನ ಮಾಹಿತಿಗೆ ಡೇ–ನಲ್ಮ್ ಶಾಖೆಯ ಸಮುದಾಯ ಸಂಘಟನಾಧಿಕಾರಿ ಈರಣ್ಣ ಅವರನ್ನು ಸಂಪರ್ಕಿಸುವಂತೆ ಮಾನವಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನುವಾರುಗಳಿಗೆ ಲಸಿಕೆ ಹಾಕಿಸಿ, ಆರ್ಥಿಕ ನಷ್ಟ ತಪ್ಪಿಸಿ: ಶಿವಾನಂದ



ಯುವ ಮಾರ್ಗ ಸುದ್ದಿ

**ರಾಯಚೂರು,ನ.5–** ಇಲಾಖಾ ಅಧಿಕಾರಿಗಳು ಮತ್ತು ಸಿಬ್ಬಂದಿ ಪೋಲಿಯೋ ಲಸಿಕೆಯ ಮಾದರಿಯಲ್ಲಿ ಎಲ್ಲಾ ಹಳ್ಳಿಗಳಲ್ಲಿ ಲಸಿಕೆ ಅಭಿಯಾನ ನಡೆಸಬೇಕು. ರೈತ ಬಾಂಧವರು ತಮ್ಮಲ್ಲಿರುವ ಎಲ್ಲಾ ದನ, ಎಮ್ಮೆ ಮತ್ತು 3 ತಿಂಗಳ ಮೇಲ್ಪಟ್ಟ ಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿ ಸಾಂಕ್ರಾಮಿಕ ರೋಗದಿಂದಾಗುವ ಆರ್ಥಿಕ ನಷ್ಟ ತಪ್ಪಿಸಬೇಕು. ಈ ಕಾರ್ಯಕ್ರಮಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಹೇಳಿದರು.

ನವೆಂಬರ್ 03ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 8ನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಕಾರ್ಯಕ್ರಮಕ್ಕೆ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ಪ್ರೋಮ್ ಸಿಂಗ್, ವಿ.ವೈ.ವಾಲ್ಮೀಕಿ ಸೇರಿದಂತೆ ಇತರರು ಇದ್ದರು.

# ನವೆಂಬರ್ 8ರಂದು ಜಿಲ್ಲಾಡಳಿತದಿಂದ ಕನಕದಾಸರ ಜಯಂತಿ

**ರಾಯಚೂರು,ನ.5–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂತಕವಿ ಕನಕದಾಸರ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನವೆಂಬರ್ 08ರ ಬೆಳಿಗ್ಗೆ 12.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಲಬುರ್ರಗಿ ವಿಭಾಗದ ತಿಂಥಿಣಿ ಬ್ರಿಡ್ಜ್ ಕನಕ ಗುರುಪೀಠದ ಪ.ಪೂ.ಶ್ರೀಸಿದ್ಧರಾಮಾನಂದ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ

# ಮುಂಡರಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ : ನೂತನ ನಿರ್ದೇಶಕರುಗಳಿಗೆ ಸನ್ಮಾನ

ಯುವ ಮಾರ್ಗ ಸುದ್ದಿ

**ಅರಕೇರಾ,ನ.5–**,ಮುಂಡರಗಿ ಗ್ರಾಮದಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ರಿ ಚುನಾವಣೆ ಚುನಾವಣೆ ಜರುಗಿತು.

ಚುನಾವಣೆಯಲ್ಲಿ ಆಯ್ಕೆಯಾದ ಸದಸ್ಯರಿಗೆ ಆರ್ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ರಾಜಶೇಖರ ನಾಯಕರವರು ತಮ್ಮ ಅರಕೇರಾ ಪಟ್ಟಣದಲ್ಲಿನ ನಿವಾಸಿ ದಲ್ಲಿ ನೂತನ ಸದಸ್ಯರಿಗೆ ಸನ್ಮಾನಿಸಿದರು.

ರಾಜಶೇಖರ್ ನಾಯಕ ಆರ್ ಡಿ ಸಿಸಿ ಬ್ಯಾಂಕ್ ನಿರ್ದೇಶಕರು ಮಾತನಾಡಿ ಕೃಷಿಕರ ಕಷ್ಟದಲ್ಲಿ ನೆರವಿಗೆ ಬರು ಏಕೈಕ ಮಿತ್ರ ಎಂದರೆ ಅದು ಕೃಷಿ ಸಹಕಾರಿ ಸಂಘಗಳು ಮಾತ್ರ. ಈ ಕಾರಣದಿಂದ ಕೃಷಿಕರು ಸಹಕಾರ ಸಂಘದಿಂದ ಪಡೆದ ಸಾಲಗಳನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮೂಲಕ ಸಂಘದ ಸದೃಢಗೆ ಪ್ರತಿಯೊಬ್ಬರ ಸಹಕಾರ ನೀಡಬೇಕು ಎಂದು ಹೇಳಿದರು.

ಸಾಲಗಾರ ಮತಕ್ಷೇತ್ರ ಸಾಮಾನ್ಯ ವರ್ಗ ದಿಂದ ಶಿವರಾಜ ತಂದೆ ಶಿವಪ್ಪ ಮುಂಡರಗಿ ,ಅಂಜನೇಯ್ಯತಂದೆ ಮಲ್ಲಯ್ಯ ಬಿ.ಗಣೇಕಲ್,ಮಲ್ಲಯ್ಯ ತಂದೆ ಭೀಮಣ್ಣ ಬಿ.ಗಣೇಕಲ್,ದೇವಮ್ಮ ಗಂಡ ವಿಶ್ವನಾಥ ರೆಡ್ಡಿ ದೇವತಗಲ್ ಸಾಬಣ್ಣ ತಂದೆ ಗುಡದಪ್ಪಮುಂಡರಗಿ,ಪರಿಶಿಷ್ಟ ಜಾತಿ ವರ್ಗದಿಂದಾ ಗಂಗಣ್ಣತಂದೆ ಲಿಂಗಣ್ಣ ಮುಂಡರಗಿ ಪರಿಶಿಷ್ಟ ಪಂಗಡವರ್ಗದ ಭೀಮಣ್ಣ ತಂದೆ ರಂಗಯ್ಯ ಸಮುದ್ರ ,ಹಿಂದುಳಿದ ವರ್ಗ.ಎ ನಾಗೇಂದ್ರ ತಂದೆ ಮಾಳಪ್ಪ ಮಂಡಲಗುಂಡ,ಹಿಂದುಳಿದ ವರ್ಗ ಬಿ. ಶಿವನಗೌಡತಂದೆ ವಿಶ್ವನಾಥ ಬಿ.ಗಣೇಕಲ್,ಅಮರಮ್ಮಗಂಡ ಕಲಪ್ಪ ಮುಂಡರಗಿ ,ಸಾಬಮ್ಮಗಂಡ ಶಿವರಾಜ ಮುಂಡರಗಿ ,ಸಾಲಗಾರ



ರಲ್ಲದ ಮತಕ್ಷೇತ್ರ ಸಾಮಾನ್ಯ ವರ್ಗ ಶಿವರಾಜತಂದೆ ಸಿದ್ದಲಿಂಗಯ್ಯ ಮಲ್ಲಾಪೂರ

ಸಂದರ್ಭದಲ್ಲಿ ವಿರೇಶಗೌಡ ಮಾಲಿಪಾಟೀಲ್ ಬಸವರಾಜ ತಿಂತಣಿ,ಶಿವರಾಜ ಹುಲಿಗುಡ್ಡ.,ಹನುಮಗೌಡಹತಾತ ಗಣಜಲಿ. ಹನುಮಂತ ದೊಡ್ಡಮನಿ ಸಮುದ್ರ, ಬಾಲಪ್ಪ ನಾಯಕಪಂದ್ಯಾನ ನರಸಮ್ಮ ನಾಯಕ ಗಣಜಲಿ ನರಸಪ್ಪ ಮುಂಡರಗಿ ಭೀಮನಗೌಡ ಸಮುದ್ರ ಬಸವರಾಜ ಆಲ್ಕೋಡ ಸಮುದ್ರ ಬಸವರಾಜ ಹೊಸಮನಿ ಸಮುದ್ರ ಹನುಮಂತ ಹೊಸಮನಿ ಸಮುದ್ರ ಭೀಮನಗೌಡ ಪಂದ್ಯಾನ ಹನುಮಂತ ಹುಲಿಗುಡ್ಡ ಮಲ್ಲನಗೌಡ ಪಂದ್ಯಾನ ಮಲ್ಲಯ್ಯ ದಳವಾಯಿ ಗಣೇಕಲ್ ಅಮರೇಶ ಬೋವಿ ಗಣೇಕಲ್ ನಟರಾಜ್ ಹೋಸಮನಿ ದೇವಪ್ಪಕೋತ್ವಲ ಮುಂಡರಗಿ,ಶಿವಪ್ಪ ತಿಂಪೂರ.ಸಿದ್ದಪ್ಪ ಕರ್ನಾಳ. ಹನುಮಂತ ಬೂಳ್ಯಾ ಮುಂಡರಗಿ, ದತ್ತಪ್ಪಾ ಗಣಜಲಿ.ಮೂರ್ತೆಪ್ಪ ಬೂಳ್ಯಾ ಗಣಜಲಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು

# ನ 14,15 ಕ್ಕೆ ಏಕತಾ ನಡಿಗೆ : ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

**ಬೀದರ್, ನ.5–** ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮದಿನಾಚರಣೆ ಪೂರ್ಣಗೊಂಡ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಇದೆ ನವೆಂಬರ 14, 15 ಕ್ಕೆ ಏಕತಾ ನಡಿಗೆ ( ಯುನಿಟಿ ಮಾರ್ಚ್ ) ಎಂಬ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಕ್ರೀಡಾ ಮತ್ತು ಯುವ ಸಬಲೀಕರಣ ಮಂತ್ರಾಲಯದ ಮೇರಾ ಯುವ ಭಾರತ್ ಬೀದರ ಅವರ ಸಂಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಹೇಳಿದರು. ಅವರು ಮಂಗಳವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನವೆಂಬರ್. 14 ರಂದು ಬೆಳಿಗ್ಗೆ 8 ಗಂಟೆಗೆ ಭೂಮರೆಡ್ಡಿ ಕಾಲೇಜುಂದ ಮೈಲೂರ ಕ್ರಾಸ್, ಬೊಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ ಭಗತ್ ಸಿಂಗ್ ವೃತ್ತ, ಹರಳಯ್ಯ ವೃತ್ತ, ಗುದುಗೆ ಆಸ್ಪತ್ರೆಯಿಂದ ನೆಹರು ಕ್ರೀಡಾಂಗಣದ ವರೆಗೆ ಹಾಗೂ ನವೆಂಬರ 15 ರಂದು ಬರಿದ್ ಶಾಹಿ ಮೈದಾನದಿಂದ ಕೇಂದ್ರ ಬಸ್ ನಿಲ್ದಾಣ, ಮಡಿವಾಳ ವೃತ್ತ, ರೋಟರಿ ವೃತ್ತ, ಬ್ರೀಮ್ಸ್ ಆಸ್ಪತ್ರೆ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ, ಗುದಗೆ ಆಸ್ಪತ್ರೆಯಿಂದ ರಂಗಮಂದಿರದ ವರೆಗೆ ನಡಿಗೆ ನಡೆಯಲಿದೆ.

## ಕಲಾ ಪ್ರತಿಭೋತ್ಸವ ಸಾಂಸ್ಕೃತಿಕ ಕಾರ್ಯಕ್ರಮದ ದಿನಾಂಕ 20, 21ಕ್ಕೆ ಮುಂದೂಡಿಕೆ

**ರಾಯಚೂರು,ನ.5–** ಇಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಮಕ್ಕಳ ಮತ್ತು ಯುವಜನರ ಕಲಾಪ್ರತಿಭೆಯ ಕಲಾ ನೈಪುಣ್ಯತೆಯನ್ನು ವೃದ್ಧಿಗೊಳಿಸುವಂತೆ ಪ್ರೋತ್ಸಾಹಿಸಲು ಕಲಾ ಪ್ರತಿಭೋತ್ಸವ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ದಿನಾಂಕವನ್ನು ನವೆಂಬರ್ 20 ಹಾಗೂ 21ಕ್ಕೆ ಮುಂಡೂಡಿಕೆ ಮಾಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಬಾಲ ಪ್ರತಿಭೆ, ಕಿಶೋರ ಪ್ರತಿಭೆ, ಯುವ ಪ್ರತಿಭೆ ಎಂಬ ಶೀರ್ಷಿಕೆಯಡಿ ಈ ಮೂರು ವಿಭಾಗಗಳ ಪ್ರತಿ ಹಂತದ ಸ್ಪರ್ಧಾರೂಪದಲ್ಲಿ ಏರ್ಪಡಿಸುವ ಪ್ರತಿ ಕಲಾಪ್ರಕಾರಗಳಲ್ಲಿ ಈ ಸ್ಪರ್ಧೆಗಳನ್ನು ದಿನಾಂಕ: 20/11/2025 ರಂದು ಬಾಲಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ದಿನಾಂಕ: 21/11/2025 ರಂದು ಯುವ ಪ್ರತಿಭೆ /ಸಮೂಹ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು.

ಜಿಲ್ಲಾ ಮಟ್ಟದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನವನ್ನು ಪಡೆದವರಲ್ಲಿ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ವಲಯ ಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಿ ಕಳುಹಿಸಿಕೊಡಲಾಗುವುದು.

ಬಾಲ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 8 ವರ್ಷ ತುಂಬಿರಬೇಕು. ಹಾಗೂ 14 ವರ್ಷಕ್ಕಿಂತ ಕಡಿಮೆಯಿರಬೇಕು. ಕಿಶೋರ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 14 ವರ್ಷವಾಗಿರಬೇಕು. ಹಾಗೂ 18 ವರ್ಷಕ್ಕಿಂತ ಕಡಿಮೆಯಿರಬೇಕು. ಮತ್ತು ಯುವ ಪ್ರತಿಭೆಯ ವಿಭಾಗದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ತುಂಬಿರಬೇಕು. ಹಾಗೂ 30 ವರ್ಷಕ್ಕಿಂತ ಕಡಿಮೆಯಿರಬೇಕು. ಕ್ರಮವಾಗಿ ಬಾಲ ಪ್ರತಿಭೆ/ಕಿಶೋರ ಪ್ರತಿಭೆ/ಯುವ ಪ್ರತಿಭೆ ಸ್ಪರ್ಧೆಗಳಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಭ್ಯರ್ಥಿಯು ವಯೋಮಿತಿಯ ದೃಢೀಕರಣಕ್ಕಾಗಿ ಬಾಲ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಶಾಲಾ ವತಿಯಿಂದ) / ಕಿಶೋರ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುತ್ತಿರುವ ಶಾಲಾ/ಕಾಲೇಜು ವತಿಯಿಂದ) / ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು (ವ್ಯಾಸಂಗ ಮಾಡುವ ಕಾಲೇಜಿನಿಂದ) ಪಡೆದ ವಯೋಮಿತಿಯ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

ಬಾಲ ಪ್ರತಿಭೆ/ಕಿಶೋರ ಪ್ರತಿಭೆ/ಯುವ ಪ್ರತಿಭೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಶಾಲೆಯಿಂದ ಬಂದ ಅಭ್ಯರ್ಥಿಯಲ್ಲದಿದ್ದಲ್ಲಿ ಅವರ ವಯಸ್ಸಿನ ಬಗ್ಗೆ ಪಂಚಾಯತಿ/ ನಗರಸಭೆ/ ಪಾಲಿಕೆ ಕಛೇರಿಯಿಂದ ಪಡೆದ ದೃಢೀಕರಣದ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

**ಬಾಲ ಪ್ರತಿಭೆ/ ಕಿಶೋರ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ವಿವಿಧ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿದೆ.**

ಶಾಸ್ತ್ರೀಯ ನೃತ್ಯಕ್ಕೆ 10–ನಿಮಿಷ, ಸುಗಮ ಸಂಗೀತಕ್ಕೆ 7–ನಿಮಿಷ, ಜಾನಪದ ಗೀತೆಗೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ–7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ–120 ನಿಮಿಷಗಳಂತೆ ಯುವ ಪ್ರತಿಭೆಯಲ್ಲಿ ಏಕವ್ಯಕ್ತಿ ಸ್ಪರ್ಧೆಗಳಿಗೆ ವಿವಿಧ ಕಲಾಪ್ರಕಾರಗಳಿಗೆ ತಕ್ಕಂತೆ ಸಮಯವನ್ನು ನಿಗದಿಪಡಿಸಲಾಗಿದೆ.

ನನ್ನ ಮೆಚ್ಚಿನ ಸಾಹಿತಿ (ಆಶುಭಾಷಣ ಸ್ಪರ್ಧೆಗೆ)–7 ನಿಮಿಷ, ಶಾಸ್ತ್ರೀಯ ನೃತ್ಯಕ್ಕೆ 10–ನಿಮಿಷ, ಸುಗಮ ಸಂಗೀತಕ್ಕೆ 7–ನಿಮಿಷ, ಹಿಂದುಸ್ಥಾನಿ ಕರ್ನಾಟಕ ವಾದ್ಯ ಸಂಗೀತಕ್ಕೆ–7 ನಿಮಿಷ, ಹಿಂದುಸ್ಥಾನಿ ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ–7 ನಿಮಿಷ, ಚಿತ್ರಕಲೆಯ ಪ್ರದರ್ಶನಕ್ಕೆ–120 ನಿಮಿಷ ಮತ್ತು ಯುವ ಪ್ರತಿಭೆಯಲ್ಲಿ ಮಾತ್ರ ಸಮೂಹ ಸ್ಪರ್ಧೆಯಲ್ಲಿ ನಾಟಕ ಕಲಾಪ್ರಕಾರಕ್ಕೆ–7 ನಿಮಿಷಗಳ ಹಾಗೆ ಸಮಯವನ್ನು ನಿಗದಿಪಡಿಸಲಾಗಿದೆ.ಜಿಲ್ಲಾ ಮಟ್ಟದಲ್ಲಿ ಪ್ರತಿ ಕಲಾ ಪ್ರಕಾರದಲ್ಲಿ ಆಯ್ಕೆಯಾದ ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ ಯುವ ಪ್ರತಿಭೆ ಹಾಗೂ ನಾಟಕ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ಒಬ್ಬರನ್ನು ಸಂಬಂಧಿತ ವಲಯ ಮಟ್ಟಕ್ಕೆ ಕಳುಹಿಸಿಕೊಡಲಾಗುವುದು. ಅಲ್ಲದೆ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಾರ್ಥಿಗಳಿಗೆ ಇಲಾಖೆಯಿಂದ ಪ್ರಮಾಣ ಪತ್ರ ನೀಡಲಾಗುವುದು.ಬಾಲ ಪ್ರತಿಭೆ / ಕಿಶೋರ ಪ್ರತಿಭೆ/ ಯುವ ಪ್ರತಿಭೆಗಳಲ್ಲಿ ಪ್ರದರ್ಶಿಸಲಿರುವ ಕಲೆಯ ವಿವರವನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಶಾಲಾ/ ಕಾಲೇಜು ಮುಖ್ಯಸ್ಥರಿಂದ ದೃಢೀಕರಿಸಿ ನವೆಂಬರ್–15ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು ಜಿಲ್ಲೆಗೆ ತಮ್ಮ ಸ್ವ–ವಿವರವನ್ನು ನೀಡಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂಜಾಟ: 7 ಜನರ ಬಂಧನ

**ಕಲಬುರಗಿ,ನ.5–**ತಾಲ್ಲೂಕಿನ ಉದನೂರ ಗ್ರಾಮದಿಂದ ನಂದಿಕೂರ ಗ್ರಾಮಕ್ಕೆ ಹೋಗುವ ಸಾರ್ವಜನಿಕ ರಸ್ತೆ ಪಕ್ಕದ ಖಾಲಿ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಯಲ್ಲಪ್ಪ, ಅಶೋಕ ಕಟಕೆ, ಶಿವಕುಮಾರ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ 7 ಜನರನ್ನು ಬಂಧಿಸಿದ್ದಾರೆ.ಶಿವಶರಣಪ್ಪ ಯಮಂಟಿ, ಶಿವರಾಜ ಬಿರಾದಾರ, ಮಹಾಂತಪ್ಪ ಅಲ್ಲಾಪೂರ, ಲಕ್ಷ್ಮೀಕಾಂತ ಧಂಗಾಪೂರ, ಮಲ್ಲಿಕಾರ್ಜುನ ಕಪನೂರ, ಶರಣಪ್ಪ ಸಿರಸಗಿ, ಜೈಭೀಮ ಕೊರಳ್ಳಿ ಎಂಬುವವರನ್ನು ಬಂಧಿಸಿ 17,320 ರೂ.ನಗದು ಜಪ್ತಿ ಮಾಡಿದ್ದಾರೆ. ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H